MAA ಫ್ರೆಂಡ್ಸ್ ಸಾರಥ್ಯದಲ್ಲಿ...

www.yuvamarga.com Yuva Marga yuva_marga_

# ಯುವ ಮಾರ್ಗ

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಸಂಪುಟ: 05 | ಸಂಚಿಕೆ: 66 | ಭಾನುವಾರ : 28–12–2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2–00

VOLUME: 05 | ISSUE: 66 | SUNDAY : 28–12–2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

## ಡಿಜಿಟಲ್ ಜನಗಣತಿಗೆ ಸಿದ್ಧತೆ ಪೂರ್ಣ



ನವದೆಹಲಿ,ಡಿ.27–2027 ರಲ್ಲಿ ಭಾರತದ ಮೊದಲ ಡಿಜಿಟಲ್ ಜನಗಣತಿಗೆ ಸಿದ್ಧತೆಗಳು ಪೂರ್ಣಗೊಂಡಿವೆ. ಮನೆ ಪಟ್ಟಿ ಮತ್ತು ವಸತಿ ಜನಗಣತಿ ಏಪ್ರಿಲ್ 2026 ರಲ್ಲಿ ಪ್ರಾರಂಭವಾಗಲಿದ್ದು, ಜನಸಂಖ್ಯಾ ಎಣಿಕೆ ಫೆಬ್ರವರಿ 2027 ರಲ್ಲಿ ನಡೆಯಲಿದೆ. ಈ ಪ್ರಕ್ರಿಯೆಯು ಆಡಳಿತಾತ್ಮಕ ಮತ್ತು ನೀತಿ ನಿರೂಪಣೆಯಲ್ಲಿ ಸಹಾಯ ಮಾಡುತ್ತದೆ. 3ನೇ ಪುಟಕ್ಕೆ>>>

## ಹೆಸರಘಟ್ಟ ಕೆರೆಯಲ್ಲಿ ತ್ಯಾಜ್ಯ ಸೇರದಂತೆ ಎಚ್ಚರಿಕೆ ವಹಿಸಿ: ಖಂಡ್ರೆ

ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ್ ಖಂಡ್ರೆರವರು ಇಂದು ಹೆಸರಘಟ್ಟ ಕೆರೆ ಸೇರಿದಂತೆ ಗ್ರೇಟರ್ ಹೆಸರಘಟ್ಟ ಸಂರಕ್ಷಿತ ಹುಲ್ಲುಗಾವಲು ಪ್ರದೇಶಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಅರಣ್ಯ ಪಡೆ ಮುಖ್ಯಸ್ಥ ಮೀನಾಕ್ಷಿನೇಗಿ, ಎಪಿಸಿಸಿ ಡಫ್ ಕುಮಾರ್ ಪುಷ್ಕರ್, ಡಿಸಿಎಫ್ ಎನ್. ರವೀಂದ್ರ ಕುಮಾರ್ ಇದ್ದಾರೆ. 3ನೇ ಪುಟಕ್ಕೆ>>>

## ಬಾಂಗ್ಲಾದಲ್ಲಿ ಹಿಂದೂಗಳ ಹತ್ಯೆಗೆ ಖಂಡಿಸಿ ಪ್ರತಿಭಟನೆ

ಮೈಸೂರು: ಡಿ.27– ಬಾಂಗ್ಲಾದೇಶದಲ್ಲಿ ಹಿಂದೂಗಳ ಹತ್ಯೆ, ಹಿಂಸಾಚಾರ ಖಂಡಿಸಿ ಮೈಸೂರು ಕನ್ನಡ ವೇದಿಕೆ ವತಿಯಿಂದ ಅಗ್ರಹಾರ ವೃತ್ತದಲ್ಲಿ ಪ್ರತಿಭಟನೆ ನಡೆಸಲಾಯಿತು. 3ನೇ ಪುಟಕ್ಕೆ>>>

# ಸ್ಥಳೀಯ ಸಂಸ್ಥೆ ಚುನಾವಣೆ ಜೆಡಿಎಸ್ ಜೊತೆ ಮೈತ್ರಿ: ಹೈಕಮಾಂಡ್ ನಿರ್ಧಾರ

ಬೆಂಗಳೂರು, ಡಿ. 27– ಸ್ಥಳೀಯ ಸಂಸ್ಥೆಗಳಲ್ಲಿ ಜೆಡಿಎಸ್ ಜತೆ ಮೈತ್ರಿ ಮಾಡಿಕೊಳ್ಳುವ ಸಂಬಂಧ ಪಕ್ಷದ ಹೈಕಮಾಂಡ್ ತೀರ್ಮಾನ ಮಾಡುತ್ತದೆ. ಹೈಕಮಾಂಡ್ ತೀರ್ಮಾನಕ್ಕೆ ನಾವೆಲ್ಲಾ ಬದ್ಧ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಹೇಳಿದರು.

ಬೆಂಗಳೂರಿನಲ್ಲಿಂದು ಬಿಜೆಪಿ ಕಚೇರಿಯಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಜೆಡಿಎಸ್ ಜತೆ ಮೈತ್ರಿ ಇಲ್ಲ ಎಂದು ನಾವ್ಯಾರು ಎಲ್ಲೂ ಹೇಳಿಲ್ಲ. ಅಂತಿಮವಾಗಿ ನಮ್ಮ ವರಿಷ್ಠರು ಮಾಜಿ ಪ್ರಧಾನಿ ದೇವೇಗೌಡರು ಹಾಗೂ ಕುಮಾರಸ್ವಾಮಿಯವರ ಜತೆ ಚರ್ಚಿಸಿ ತೀರ್ಮಾನ ಕೈಗೊಳ್ಳುತ್ತಾರೆ. ಆ ತೀರ್ಮಾನಕ್ಕೆ ನಾವು ಬದ್ಧರಾಗಿರುತ್ತೇವೆ ಎಂದರು.

ಮಾಜಿ ಪ್ರಧಾನಿ ದೇವೇಗೌಡರ ಬಗ್ಗೆ ನಮಗೆ ಗೌರವ ಇದೆ. ಅವರು ಮುತ್ಸದ್ದಿಗಳು. ಸ್ಥಳೀಯ ಸಂಸ್ಥೆಗಳಲ್ಲಿ ಬಿಜೆಪಿ ಜತೆ ಮೈತ್ರಿ ಇಲ್ಲ ಎಂಬ ದೇವೇಗೌಡರ ಹೇಳಿಕೆಯನ್ನು ತಪ್ಪಾಗಿ ಅರ್ಥೈಸುವ ಅಗತ್ಯವಿಲ್ಲ. ವರಿಷ್ಠರು ಈ ಗೊಂದಲಗಳನ್ನು ಪರಿಹರಿಸುತ್ತಾರೆ. ವರಿಷ್ಠರು ಏನು ಹೇಳುತ್ತಾರೋ ಅದನ್ನು ಕೇಳುತ್ತೇವೆ ಎಂದು ಸ್ಪಷ್ಟಪಡಿಸಿದರು.

ಮೊನ್ನೆ ನಡೆದ ಕೆಲ ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಬಿಜೆಪಿ ಬಹುಮತ ಪಡೆದಿದೆ. ಕಾರ್ಯಕರ್ತರ ಆಕಾಂಕ್ಷೆಯಂತೆ ಅಧ್ಯಕ್ಷನಾಗಿ ನಾನು ಮಾತನಾಡುವುದು ನನ್ನ ಕರ್ತವ್ಯ. ರಾಜ್ಯದಲ್ಲಿ ಬಿಜೆಪಿ ಅಧಿಕಾರಕ್ಕೆ ಬರಬೇಕು. ಆ ಮೂಲಕ ಮೋದಿಯವರ ಕೈ ಬಲಪಡಿಸಬೇಕು ಎಂಬುದು ನಮ್ಮ ಮತ್ತು ಜೆಡಿಎಸ್ ನಾಯಕರ ಅಪೇಕ್ಷೆಯಾಗಿದೆ ಎಂದು ಅವರು ಹೇಳಿದರು.

ನರೇಗಾ ಯೋಜನೆಯ ಹೆಸರನ್ನು ಬದಲಾಯಿಸಿರುವುದಕ್ಕೆ ಕಾಂಗ್ರೆಸ್‌ನವರು ಪ್ರಧಾನಿ ಮೋದಿಯವರನ್ನು ಟೀಕೆ ಮಾಡುತ್ತಿರುವುದು ಸರಿಯಲ್ಲ. ಮಹಾತ್ಮ ಗಾಂಧಿ ಬಗ್ಗೆ ಕಾಂಗ್ರೆಸ್ ಪಕ್ಷ ಮೊಸಳೆ ಕಣ್ಣೀರು ಹಾಕುತ್ತಿದೆ. ಮಹಾತ್ಮಗಾಂಧಿ, ಸರ್ದಾರ್ ವಲ್ಲಭಭಾಯಿ ಪಟೇಲ್, ಅಂಬೇಡ್ಕರ್‌ರವರ ಸ್ಮಾರಕ ನಿರ್ಮಾಣ ಮಾಡಿರುವುದು ಎನ್‌ಡಿಎ, ಕಾಂಗ್ರೆಸ್ ಅಲ್ಲ. ಗಾಂಧೀಜಿಯವರ ಸಬರಮತಿ ಆಶ್ರಮವನ್ನು ಅಭಿವೃದ್ಧಿ ಮಾಡಿದ್ದು ಎನ್‌ಡಿಎ ಎಂದರು.

ಪ್ರಧಾನಿ ಮೋದಿಯವರು ಹಿಂದುಳಿದ ವರ್ಗಕ್ಕೆ ಸೇರಿದ್ದಾರೆ. ಆದರೂ ಅವರನ್ನು ಕಾಂಗ್ರೆಸ್ ಪಕ್ಷ ಸಹಿಸುತ್ತಿಲ್ಲ. ಮುಖ್ಯಮಂತ್ರಿ ಸಿದ್ದರಾಮಯ್ಯನವರೇ ಹೆಚ್ಚು ಟೀಕೆ ಮಾಡುತ್ತಿದ್ದಾರೆ. ಕಾಂಗ್ರೆಸ್‌ನವರಿಗೆ ಮೋದಿಯವರ ಜನಪ್ರಿಯತೆ ಸಹಿಸಲು ಆಗುತ್ತಿಲ್ಲ. ಹಾಗಾಗಿ ವೃತಾ ಆರೋಪಗಳನ್ನು ಮಾಡುತ್ತಿದ್ದಾರೆ ಎಂದು ಹರಿಹಾಯ್ದರು.

ಕಾಂಗ್ರೆಸ್ ಪಕ್ಷದವರಿಗೆ ಗಾಂಧೀಜಿಯವರ ಬಗ್ಗೆ ಮಾತನಾಡುವ ನೈತಿಕತೆ ಇಲ್ಲ ಎಂದು ಅವರು ಹೇಳಿದರು. ರಾಜ್ಯದ ಕಾಂಗ್ರೆಸ್ ಸರ್ಕಾರದಲ್ಲಿ ಭ್ರಷ್ಟಾಚಾರ ಮಿತಿ ಮೀರಿದೆ.



ವಸತಿ ಸಚಿವ ಜಮೀರ್ ಆಪ್ತ ಕಾರ್ಯದರ್ಶಿ ಸರ್ಫರಾಜ್ ಖಾನ್ ರವರ ಮನೆ ಮೇಲೆ ಲೋಕಾಯುಕ್ತ ದಾಳಿಯಾಗಿದೆ. ಅವರ ಮನೆಯಲ್ಲಿ 14 ಕೋಟಿ ರೂ. ವಶಪಡಿಸಿಕೊಳ್ಳಲಾಗಿದೆ. ಇಷ್ಟಾದರೂ ಸರ್ಕಾರ ಏನೂ ಕ್ರಮ ಕೈಗೊಂಡಿಲ್ಲ. ಈ ಬಗ್ಗೆ ಮೃದು ಧೋರಣೆ ಅನುಸರಿಸುತ್ತಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಜನರಿಗೆ ಉತ್ತರ ನೀಡಬೇಕು ಎಂದು ಒತ್ತಾಯಿಸಿದರು.

ಕಾಂಗ್ರೆಸ್ ಸರ್ಕಾರ ಯಾವುದೇ ಟೀಕೆ ಸಹಿಸಲ್ಲ. ಇದೊಂದು ಅಸಹಿಷ್ಣು ಸರ್ಕಾರ. ರಾಜ್ಯದಲ್ಲಿ ದ್ವೇಷ ಭಾಷಣ ಮಸೂದೆ ತಂದಿದೆ. **2ನೇ ಪುಟಕ್ಕೆ**>>>

## ಮಾನ್ವಿ: ಸರ್ಕಾರಿ ಶಾಲೆಯಲ್ಲಿ ತಹಸೀಲ್ದಾರ್ ರಿಂದ ಪಾಠ: ವಿದ್ಯಾರ್ಥಿಗಳಲ್ಲಿ ಆತ್ಮವಿಶ್ವಾಸ ತುಂಬಿದ ಭೀಮರಾಯ ರಾಮ ಸಮುದ್ರ

ಯುವಮಾರ್ಗ ಸುದ್ದಿ





**ಮಾನ್ವಿ:,ಡಿ.27**–ಪಟ್ಟಣದ ಬಾಲಕಿಯರ ಸರ್ಕಾರಿ ಪ್ರೌಢ ಶಾಲೆಯಲ್ಲಿ ಶನಿವಾರ ವಿಶೇಷ ಶೈಕ್ಷಣಿಕ ಚಟುವಟಿಕೆಯೊಂದು ಜರುಗಿತು. ಮಾನ್ವಿ ತಹಸೀಲ್ದಾರ್ ಆದ ಭೀಮರಾಯ ರಾಮು ಸಮುದ್ರ ಅವರು ಶಾಲಾ ಭೇಟಿ ನೀಡಿ, ಎಸ್.ಎಸ್.ಎಲ್.ಸಿ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸುವ ಮೂಲಕ ಗಮನ ಸೆಳೆದರು.

ತಹಸೀಲ್ದಾರ್ ಅವರು ಶಿಕ್ಷಕರಾಗಿ ವಿದ್ಯಾರ್ಥಿಗಳಿಗೆ ಬೋಧನೆ ಮಾಡಿದರು. ಹತ್ತನೇ ತರಗತಿಯ ಕನ್ನಡ ವಿಷಯದ ಪ್ರಮುಖ ಪದ್ಯವಾದ 'ಕೆಮ್ಮನೆ ಮಿಸೆವೊತ್ತೆನೇ' ಭಾಗವನ್ನು ವಿದ್ಯಾರ್ಥಿಗಳಿಗೆ ಬಹಳ ಆಸಕ್ತಿದಾಯಕವಾಗಿ ವಿವರಿಸಿದರು. ಪದ್ಯದ ಸಾರಾಂಶ ಮತ್ತು ಅದರ ಹಿಂದಿನ ಆಶಯವನ್ನು ವಿದ್ಯಾರ್ಥಿಗಳಿಗೆ ಮನವರಿಕೆ ಮಾಡಿಕೊಟ್ಟರು.

ನಂತರ ವಿದ್ಯಾರ್ಥಿಗಳೊಂದಿಗೆ ಪರೀಕ್ಷಾ ಸಿದ್ಧತೆಯ ಬಗ್ಗೆ ಚರ್ಚಿಸಿದ ಅವರು, ಪರೀಕ್ಷೆಯ ಭಯವನ್ನು ಬಿಟ್ಟು ಆತ್ಮವಿಶ್ವಾಸದಿಂದ ಸಿದ್ಧರಾಗಬೇಕು ಮತ್ತು ಅಭ್ಯಾಸದ ಅವಧಿಯಲ್ಲಿ ಸಮಯದ ಸದುಪಯೋಗ ಪಡಿಸಿಕೊಳ್ಳಬೇಕು ಎಂದು ಅಮೂಲ್ಯವಾದ ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಶಾಲೆಯ ಉಪ ಪ್ರಾಂಶುಪಾಲರಾದ ಸುಧಾಕರ ಸಂಜೀವ, ರೇಖಾದೇವಿ, ಬಂಡೆಮ್ಮ, ಅಶೋಕ್ ಕುಮಾರ್ ಮಳ್ಳಿ,ಮಂಜುಳಾ ಹಿರೇಮಠ, ರಜನಿ, ಶೇಖ್ ಹುಸೇನ್, ಚನ್ನಬಸವರಾಜ, ಪ್ರಮೋದ ಕುಮಾರ, ಶ್ರೀಮತಿ ಕಟ್ಟಿ, ನುಜಹತ್ ಫಾತಿಮಾ, ಶರಣಮ್ಮ, ಜಯಭೀಮ ಭಾವಿಕಟ್ಟಿ, ಈರಾಮಣಿ, ಶರತ್ ಕುಮಾರ್, ರಾಜಶೇಖರ. ಎಚ್, ರೇಣುಕಾ ಇದ್ದರು.

## ಡಿಸೆಂಬರ್ 29ರಿಂದ ಕೃಷಿ, ಪಶುವೈದ್ಯಕೀಯ ವಿಷಯದ ಅಂತಾರಾಷ್ಟ್ರೀಯ ಸಮ್ಮೇಳನ

ಯುವಮಾರ್ಗ ಸುದ್ದಿ

**ರಾಯಚೂರು ಡಿ.27**–ರಾಯಚೂರು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ ಹಾಗೂ ರಾಷ್ಟ್ರೀಯ ಕೃಷಿ ಅಭಿವೃದ್ಧಿ ಸಹಕಾರಿ ನಿಯಮಿತ ಬಾರಾಮುಲ್ಲಾ, ಜಮ್ಮು ಮತ್ತು ಕಾಶ್ಮೀರ ಇವರ ಸಹಯೋಗದಲ್ಲಿ "ಕೃಷಿ, ಪಶುವೈದ್ಯಕೀಯ ಮತ್ತು ಕೃಷಿಗೆ ಸಂಬಂಧಿತ ವಿಷಯಗಳಲ್ಲಿ ಸುಸ್ಥಿರ ನಾವಿನ್ಯತೆಗಳ" ಕುರಿತಾದ ಅಂತರಾಷ್ಟ್ರೀಯ ಸಮ್ಮೇಳನವು (ಆನ್‌ಲೈನ್ ಮತ್ತು ಆಫ್‌ಲೈನ್) ಡಿಸೆಂಬರ್ 29 ರಿಂದ 31 ರವರೆಗೆ ರಾಯಚೂರು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಶ್ರೀ ಜಗಜ್ಯೋತಿ ಬಸವೇಶ್ವರ ಪ್ರೇಕ್ಷಾಗೃಹದಲ್ಲಿ ನಡೆಯುತ್ತಿದೆ.

ಮೂರು ದಿನಗಳ ಅಂತಾರಾಷ್ಟ್ರೀಯ ಸಮ್ಮೇಳನದಲ್ಲಿ ದೇಶದ ವಿವಿಧ ರಾಜ್ಯಗಳ ಉದಯೋನ್ಮುಖ ತಂತ್ರಜ್ಞರು, ಸಂಶೋಧನಾ ವಿದ್ವಾಂಸರು, ಶೈಕ್ಷಣಿಕ ಮತ್ತು ಕೃಷಿ ಉದ್ಯಮದ ಪ್ರತಿನಿಧಿಗಳು, ನೀತಿ ನಿರೂಪಕರು ಹಾಗೂ ವಿದ್ಯಾರ್ಥಿಗಳನ್ನೊಳಗೊಂಡಂತೆ ಸುಮಾರು 500ಕ್ಕಿಂತ ಹೆಚ್ಚು ಸಮ್ಮೇಳನಾರ್ಥಿಗಳು ಭಾಗವಹಿಸುವ ನಿರೀಕ್ಷೆಯಿದೆ. ಅಲ್ಲದೇ, ಕುವೈತ್ ಹಾಗೂ ಮತ್ತಿತರ ದೇಶಗಳಿಂದಲೂ ಕೂಡ ಸಮ್ಮೇಳನಾರ್ಥಿಗಳು ಭಾಗವಹಿಸುವರು. ಕೃಷಿ, ಪಶುವೈದ್ಯಕೀಯ ಮತ್ತು ಕೃಷಿಗೆ ಸಂಬಂಧಿಸಿದ ವಿಜ್ಞಾನಗಳ ವಿಷಯಾಧಾರಿತ ಕ್ಷೇತ್ರಗಳ ಅಡಿಯಲ್ಲಿ ಮೌಖಿಕ ವಿಷಯ ಮಂಡನೆಗೆ ಸಮ್ಮೇಳನವು ಸಾಕ್ಷಿಯಾಗಲಿದೆ.

ನವದೆಹಲಿಯ ಭಾರತೀಯ ಕೃಷಿ ಸಂಶೋಧನಾ ಸಂಸ್ಥೆಯ ನಿರ್ದೇಶಕರಾದ ಡಾ. ಸಿ. ಎಚ್. ಶ್ರೀನಿವಾಸ ಉದ್ಘಾಟಿಸುವರು. ರಾಯಚೂರು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಗೌರವಾನ್ವಿತ ಕುಲಪತಿಗಳಾದ ಡಾ. ಎಂ. ಹನುಮಂತಪ್ಪ ಅವರು ಅಧ್ಯಕ್ಷತೆ ವಹಿಸುವರು. ಡಾ. ಎಸ್. ವಿ ಸುರೇಶ್, ಗೌರವಾನ್ವಿತ ಕುಲಪತಿಗಳು, ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು, ಡಾ. ಆರ್. ಸಿ. ಜಗದೀಶ್, ಗೌರವಾನ್ವಿತ ಕುಲಪತಿಗಳು, ಕೆಎಸ್‌ಎನ್ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಶಿವಮೊಗ್ಗ, ಡಾ. ಕೆ. ಸಿ. ವೀರಣ್ಣ, ಗೌರವಾನ್ವಿತ ಕುಲಪತಿಗಳು, ಕರ್ನಾಟಕ ಪಶುವೈದ್ಯಕೀಯ, ಪಶು ಮತ್ತು ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಬೀದರ್, ಡಾ. ಪಿ. ಎಲ್. ಪಾಟೀಲ್, ಗೌರವಾನ್ವಿತ ಕುಲಪತಿಗಳು, ಕೃಷಿ ವಿಶ್ವವಿದ್ಯಾಲಯ, ಧಾರವಾಡ,

ಡಾ. ವಿಷ್ಣುವರ್ಧನ, ಗೌರವಾನ್ವಿತ ಕುಲಪತಿಗಳು, ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಬಾಗಲಕೋಟ ಹಾಗೂ ಶ್ರೀ ಪಿ. ಕಮರ್–ಉದ್–ದಿನ್ ಅಧ್ಯಕ್ಷರು, ರಾಷ್ಟ್ರೀಯ ಕೃಷಿ ಅಭಿವೃದ್ಧಿ ಸಹಕಾರಿ ನಿಯಮಿತ ಬಾರಾಮುಲ್ಲಾ, ಜಮ್ಮು ಮತ್ತು ಕಾಶ್ಮೀರ ಅವರು ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು. ವಿಶ್ವವಿದ್ಯಾಲಯದ ಆಡಳಿತ ಮಂಡಳಿಯ ಗೌರವಾನ್ವಿತ ಸದಸ್ಯರು, ಅಧಿಕಾರಿಗಳು, ಪ್ರಾಧ್ಯಾಪಕ ವೃಂದ, ಸ್ನಾತಕೋತ್ತರ ವಿದ್ಯಾರ್ಥಿಗಳು ಸೇರಿದಂತೆ ದೇಶದೆಲ್ಲೆಡೆಯಿಂದ ಬರುವ ಸಮ್ಮೇಳನಾರ್ಥಿಗಳು ಉಪಸ್ಥಿತರಿರುವರು ಎಂದು ಕೃವಿವಿಯ ಆಡಳಿತಾಧಿಕಾರಿಗಳು ಹಾಗು ಸಮ್ಮೇಳನ ಸಂಘಟನಾ ಅಧ್ಯಕ್ಷರಾದ ಡಾ.ಜಾಗೃತಿ. ಬಿ ದೇಶಮಾನ್ಯ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಹೆಗ್ಗಡದಿನ್ನಿ ಗ್ರಾಮದಲ್ಲಿ ಕಲುಷಿತ ನೀರು ಕುಡಿದು 40 ಕುರಿಗಳ ಸಾವು

ಯುವಮಾರ್ಗ ಸುದ್ದಿ

**ಅರಕೇರಾ ,ಡಿ.27**–ಕಲುಷಿತ ನೀರು ಕುಡಿದು 40 ಕುರಿಗಳು ಸಾವನ್ನಪ್ಪಿರುವ ದಾರುಣ ಘಟನೆ ತಾಲ್ಲೂಕಿನ ಹೆಗ್ಗಡದಿನ್ನಿ ಗ್ರಾಮದ ಹೊರಹೊಲಯದಲ್ಲಿ ಶನಿವಾರ ನಡೆದಿದೆ.

ಮಲ್ಲೆನಾಯಕನದೊಡ್ಡಿ ಗ್ರಾಮದ ಭೀಮಯ್ಯ ನಾಯಕ ತಂದೆ ಹನುಮಂತರಾಯ ಇವರಿಗೆ ಸೇರಿದ 35 ಕುರಿಗಳು ಹಾಗೂ ಕೊತ್ತದೊಡ್ಡಿ ಗ್ರಾಮದ ಲಕ್ಷ್ಮಣ ತಂದೆ ಸಾಬಗೌಡ ಇವರಿಗೆ ಸೇರಿದ 5 ಕುರಿಗಳು ಒಟ್ಟು 40 ಕುರಿಗಳು ಸಾವನ್ನಪ್ಪಿರುವ ಕುರಿತು ಮಾಹಿತಿ ಲಭ್ಯವಾಗಿದೆ. ಸುಮಾರು 250 ಕುರಿಗಳನ್ನು ಮೇಯಿಸಲು ಕರೆದುಕೊಂಡು ಹೋಗಿದ್ದರು. ಹಳ್ಳದ ನೀರಿನೊಂದಿಗೆ ಕಲುಷಿತಗೊಂಡ ನೀರು ಬೆರೆತ್ತಿದ್ದು.ಅದೇ ನೀರನ್ನು ಕುರಿಗಳು ಕುಡಿದು ಸ್ಥಳದಲ್ಲೆ ಸಾವನ್ನಪ್ಪಿವೆ. ಸ್ಥಳಕ್ಕಾಗಿಮಿಸಿದ ಪಶು ವೆ?ದ್ಯರು ಇನ್ನೂ ಅಸ್ವಸ್ಥಗೊಂಡ ಕುರಿಗಳಿಗೆ ಚಿಕಿತ್ಸೆ ನೀಡಿ ಸಾವಿನ ದವಡೆಯಿಂದ ಪಾರು ಮಾಡಿದ್ದಾರೆ. ಈ ಕುರಿತು ಗಬ್ಬೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.



ಸುದ್ದಿ ತಿಳಿದ ಶಾಸಕಿ. ಕರೆಮ್ಮ ಜಿ. ನಾಯಕ ಘಟನಾ ಸ್ಥಳಕ್ಕೆ ಭೇಟಿ ನೀಡಿ ಕುರಿಗಳ ಮಾಲಿಕನಿಗೆ ಸಾಂತ್ವನ ಹೇಳಿದರು. ಸರ್ಕಾರದಿಂದ ಸಿಗುವ ಪರಿಹಾರವನ್ನು ದೊರಕಿಸಿಕೊಡುವ ಭರವಸೆ ನೀಡಿದರು. ಕಂದಾಯ ಇಲಾಖೆ ಹಾಗೂ ಪಶು ಇಲಾಖೆಯ ಅಧಿಕಾರಿ ಸಿಬ್ಬಂದಿ ಇದ್ದರು.

## ರಾಜ್ಯಮಟ್ಟದ ಸ್ಕೌಟ್ಸ್ ಗೈಡ್ಸ್ ಜಾಂಬೋರೇಟ್ ಗೆ ಶ್ರೀ ಗುರುಕುಲ ಶಾಲೆಯ ವಿದ್ಯಾರ್ಥಿಗಳು ಭಾಗಿ

ಯುವಮಾರ್ಗ ಸುದ್ದಿ



**ರಾಯಚೂರು,ಡಿ.27**–ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಕರ್ನಾಟಕ ರಾಜ್ಯ ಸಂಸ್ಥೆಯ ರಾಜ್ಯ ಮುಖ್ಯ ಆಯುಕ್ತರಾದ ಪಿ. ಜಿ. ಆರ್.ಸಿಂಧ್ಯಾರವರ ನೇತೃತ್ವದಲ್ಲಿಇದೇ 27 ನೇ ತಾರೀಖಿನಿಂದ ಜನವರಿ 2ರವರೆಗೆ ಬೆಳಗಾವಿಯಲ್ಲಿ ನಡೆಯುತ್ತಿರುವ ಕರ್ನಾಟಕ ರಾಜ್ಯ ಸ್ಕೌಟ್ಸ್ ಮತ್ತು ಗೈಡ್ಸ್ ಜಾಂಬೋರೇಟ್ ನಲ್ಲಿ ಭಾಗವಹಿಸಲು ರಾಯಚೂರಿನ

ಎಲ್. ಬಿ.ಎಸ್ ನಗರದಲ್ಲಿರುವ ಶ್ರೀಗುರುಕುಲ ಇ– ಟೆಕ್ನೋ ಶಾಲೆಯ ವಿದ್ಯಾರ್ಥಿಗಳಾದ ಅಭಿಲಾಷ್. ಚೇತನ್, ಉದಯ್. ರೆಹಾನ್ , ವಿಸ್ಮಿತಾ ಆ. ನಿಖಿತಾ , ಸೌಮ್ಯಶ್ರೀ, ಶಿರೀಷಾ , ಹಾಗೂ ಶಿಕ್ಷಕಿಯರಾದ ಶ್ರೀಮತಿ ವಂದನಾ ೦.ಅ. ಶ್ರೀಮತಿ ಲಲಿತಾ ರವರು ಭಾಗವಹಿಸಿ ಶಾಲೆಯ ಕೀರ್ತಿಯನ್ನು ಹೆಚ್ಚಿಸಿದ್ದಾರೆ.

## ಭೀಮಾ ಕೋರೆಗಾಂವ್ ವಿಜಯೋತ್ಸವ ಡಿ.31 ರಂದು ಪಂಜಿನ ಮೆರವಣಿಗೆ: ಪ್ರವೀಣ್ ಧುಮತಿ.

ಯುವಮಾರ್ಗ ಸುದ್ದಿ

**ಸಿಂದನೂರು,ಡಿ.27**–ಭೀಮಾ ಕೋರೆಗಾಂವ್ 208ನೇ ವಿಜಯೋತ್ಸವ ಹಿನ್ನೆಲೆ ಭೀಮ್ ಆರ್ಮಿ (ಭಾರತ ಏಕತಾ ಮಿಷ 'ನ್) ತಾಲೂಕು ಸಮಿತಿ ವತಿಯಿಂದ ಡಿಸೆಂಬರ್ 31ರಂದು ಪಂಜಿನ ಮೆರವಣಿಗೆ ಹಮ್ಮಿಕೊಳ್ಳಲಾಗಿದೆ ಎಂದು ತಾಲೂಕು ಸಮಿತಿ ಅಧ್ಯಕ್ಷ ಪ್ರವೀಣ್ ಧುಮತಿ ಹೇಳಿದರು.

ಶನಿವಾರ ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಟಿ ನಡೆಸಿ ಮಾತನಾಡಿದ ಅವರು, 28 ಸಾವಿರ ಸೈನಿಕರನ್ನು ಕೇವಲ 500 ಜನ ಸೈನಿಕರು ಸೇರಿಕೊಂಡು ಸೋಲಿಸಿದ ಕದನ ಭೀಮಾ ಕೋರೆ'ಗಾಂವ್ ಆಗಿದೆ. ಪೇಶ್ವೆಗಳ ಆಡಳಿತದಲ್ಲಿದ್ದ ಜಾತಿ, ಅಸ್ಪೃಶ್ಯತೆ, ಮೇಲು–ಕೀಳುಗಳ ವಿರುದ್ಧ ಸೆಟೆದು ನಿಂತು ಮಾನವೀಯ ಮೌಲ್ಯಗಳನ್ನು ಪಡೆದುಕೊಳ್ಳಲು ಹಂಬಲಿಸಿದ ಮಹರ್ **2ನೇ ಪುಟಕ್ಕೆ**>>>>



## ಮೊದಲನೇಯ ಪುಟದಿಂದ

# ಸ್ಥಳೀಯ ಸಂಸ್ಥೆ ಚುನಾವಣೆ ಜೆಡಿಎಸ್ ಜೊತೆ ಮೈತ್ರಿ: ಹೈಕಮಾಂಡ್ ನಿರ್ಧಾರ

ಈ ಮಸೂದೆ ಮೂಲಕ ಪ್ರಜಾಪ್ರಭುತ್ವದ ಕಗ್ಗೊಲೆಗೆ ಮುಂದಾಗಿದೆ ಎಂದು ಟೀಕಿಸಿ, ದ್ವೇಷ ಭಾಷಣ ಮಸೂದೆ ಪ್ರಜಾಪ್ರಭುತ್ವ ವಿರೋಧಿ ಎಂದರು.ಬೆಳಗಾವಿಯಲ್ಲಿ ನಡೆದ ವಿಧಾನಮಂಡಲದ ಚಳಿಗಾಲದ ಅಧಿವೇಶನದಲ್ಲಿ ಉತ್ತರ ಕರ್ನಾಟಕ ಭಾಗದ ಸಮಸ್ಯೆಗಳ ಬಗ್ಗೆ ಸುದೀರ್ಘ ಚರ್ಚೆಯಾಯಿತು. ಆದರೆ ಸರ್ಕಾರ ಸರಿಯಾದ ಸ್ಪಂದನೆ ವ್ಯಕ್ತ ಮಾಡಲಿಲ್ಲ. ನೀರಾವರಿ ಸಮಸ್ಯೆ, ಕಾನೂನ ಸುವ್ಯವಸ್ಥೆ, ಉತ್ತರ ಕರ್ನಾಟಕದ ಸಮಸ್ಯೆಗಳಿಗೆ ಸಮರ್ಪಕ ಉತ್ತರ ಕೊಡಲಿಲ್ಲ ಎಂದು ಅವರು ದೂರಿದರು.


ಅಧಿವೇಶನದ ಸಂದರ್ಭದಲ್ಲಿ ಸಚಿವರುಗಳು, ಡಿನ್ನರ್, ಬ್ರೇಕ್ ಫಾಸ್ಟ್ ಮೀಟಿಂಗ್‌ನಲ್ಲೇ ಕಾಲ ಹರಣ ಮಾಡಿದರು. ಯಾವುದೇ ಜ್ವಲಂತ ಸಮಸ್ಯೆಗಳಿಗೆ ಉತ್ತರ ಕೊಡಲಿಲ್ಲ. ಅಧಿವೇಶನ ಸಂದರ್ಭದಲ್ಲೂ ಕುರ್ಚಿ ಕಚ್ಚಾಟ ಮುಂದುವರೆಸಿದರು. ಯಾವ ಪುರುಷಾರ್ಥಕ್ಕೆ ಅಧಿವೇಶನ ನಡೆಸಿದರು ಎಂದು ಹರಿಹಾಯ್ದರು. ಧರ್ಮಸ್ಥಳದ ವಿರುದ್ಧ ಅಪಪ್ರಚಾರ ನಡೆಸಿ ಹಿಂದೂಗಳ ಭಾವನೆಗೆ ಧಕ್ಕೆ ತರುವ ಕೆಲಸ ನಡೆಯಿತು. ರಾಜ್ಯ ಸರ್ಕಾರದ ಬೇಜವಾಬ್ದಾರಿ ಬಗ್ಗೆ ನಾವು ಧರ್ಮಸ್ಥಳ ಚಲೋ ನಡೆಸಿದೆವು. ಇಷ್ಟೆಲ್ಲಾ ಆದರೂ ಮುಖ್ಯಮಂತ್ರಿಗಳು ಕ್ಷಮೆ ಕೇಳಲಿಲ್ಲ. ಧರ್ಮಸ್ಥಳದ ವಿರುದ್ಧ ಷಡ್ಯಂತ್ರದ ಹಿಂದಿನ ಕೈಗಳ ಹೆಸರುಗಳನ್ನು ಸರ್ಕಾರ ಬಹಿರಂಗ ಮಾಡಿಲ್ಲ ಎಂದು ಟೀಕಿಸಿದರು.

ಈ ಸರ್ಕಾರದಲ್ಲಿ ಬಂಡವಾಳ ಹೂಡಿಕೆ ಸ್ನೇಹಿ ನೀತಿಗಳಿಲ್ಲ. ಹಾಗಾಗಿ ದೊಡ್ಡ ದೊಡ್ಡ ಉದ್ಯಮಗಳು ಹೊರ ರಾಜ್ಯಕ್ಕೆ ಹೋಗುತ್ತಿವೆ. ಟಯೊಟಾ. ಫಾಕ್ಸಕಾನ್ ನಮ್ಮ ಕೈ ತಪ್ಪಿದೆ ಎಂದು ದೂರಿದರು.

# ಭೀಮಾ ಕೋರೆಗಾಂವ್ ವಿಜಯೋತ್ಸವ ಡಿ.31 ರಂದು ಪಂಜಿನ ಮೆರವಣಿಗೆ: ಪ್ರವೀಣ್ ಧುಮತಿ.

ಂವ್ ವಿಜಯೋತ್ಸವವಾಗಿದೆ. ಭೀಮಾ ತೀರದಲ್ಲಿ ಕಾಳಗ ನಡೆದಿದ್ದರಿಂದ ಇತಿಹಾಸದಲ್ಲಿ ಭೀಮಾ ಕೋರೇಗಾಂವ್ ಯುದ್ಧವೆಂದೇ ಪ್ರಸಿದ್ಧಿ ಪಡೆದಿದೆ. ನಗರದ ಎಪಿಎಂಸಿಯಿಂದ ತಾಲೂಕು ಪಂಚಾಯಿತಿ ಆವರಣದಲ್ಲಿರುವ ಅಂಬೇಡ್ಕರ್ ಪುತ್ಥಳಿವರೆಗೆ ಭೀಮ್ ಸೈನಿಕರ ಧೈರ್ಯ, ಸಾ ಹಸ, ಕೆಚ್ಚೆದೆಯ ಹೋರಾಟಕ್ಕೆ ಇದು ಸಾಕ್ಷಿಯಾಗಿದೆ. ಅಷ್ಟೇ ಅಲ್ಲದೇ ಶೋಷಿತರು, ಮೇಲ್ಜಾತಿ ಶೋಷಕರ ಶೋಷಣೆಯ ನಡವಳಿಕೆ ವಿರುದ್ಧ ಯುದ್ಧವನ್ನು ಘೋಷಿಸಿ, ಗೆಲುವು ಸಾಧಿಸಿದಂತ ದಿನವೇ ಭೀಮಾ ಕೋರೆಗಾ ಆರ್ಮಿ ಕಾರ್ಯಕರ್ತರು ಸೇರಿದಂತೆ ಮುಖಂಡರಿಂದ ಪಂಜಿನ ಮೆರವಣಿಗೆ ನಡೆಯಲಿದೆ. ನಂತರ ಮಹಾತ್ಮಗಾಂಧಿ ವೃತ್ತದಲ್ಲಿ ಕ್ಯಾಲೆಂಡರ್ ಬಿಡುಗಡೆ ಮಾಡಲಾಗುವುದು. ಈ ವಿಜಯೋತ್ಸವದಲ್ಲಿ ವಿದ್ಯಾರ್ಥಿ ಯುವಜನರು, ವಿವಿಧ ಜನಪರ ಸಂಘಟನೆಗಳ ಮುಖಂಡರು, ದಲಿತ ಸಂಘಟನೆಗಳ ಮುಖಂಡರು ಭಾಗವಹಿಸಲು ಪ್ರಮೀಣ್‌ಕುಮಾರ ಧುಮತಿ ಮನವಿ ಮಾಡಿದರು. ಈ ಸುದ್ದಿಗೋಷ್ಠಿಯಲ್ಲಿ ಉಮೇಶ ಸುಕಾಲಪೇಟೆ, ಪರಶುರಾಮ, ಬೀರಪ್ಪ, ಪ್ರದೀಪ್, ವೀರಭದ್ರಯ್ಯ ಇದ್ದರು.

## ಮಾನವಿ ತಾಲೂಕು ಕಂಡ ಅಪರೂಪದ ಶಿಕ್ಷಣ ಸಂಯೋಜಕ ವಿದ್ಯಾರ್ಥಿಗಳ ನೆಚ್ಚಿನ 'ಎನ್ ಎಂ ಎಂ ಎಸ್ ಸರ್' ಮಹ್ಮದ್ ಅಬ್ದುಲ್ ಯೂನುಸ್:




ಯುವಮಾರ್ಗ ಸುದ್ದಿ

ಸರ್ಕಾರಿ ಸೇವೆಯನ್ನು ಕೇವಲ ಕರ್ತವ್ಯವೆಂದು ಭಾವಿಸದೇ, ಅದನ್ನೊಂದು ಸಾಮಾಜಿಕ ಜವಾಬ್ದಾರಿಯಾಗಿ ಸ್ವೀಕರಿಸಿದಾಗ ಎಂತಹ ಅದ್ಭುತ ಬದಲಾವಣೆ ತರಬಹುದು ಎಂಬುದಕ್ಕೆ ಶ್ರೀ ಮೊಹಮ್ಮದ್ ಅಬ್ದುಲ್ ಯೂನುಸ್ ಅವರೇ ಸಾಕ್ಷಿ. ಮಾನವಿ ತಾಲೂಕಿನ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯದಲ್ಲಿ ಆರು ವರ್ಷಗಳ ಕಾಲ ಶಿಕ್ಷಣ ಸಂಯೋಜಕರಾಗಿ ಇವರು ಸಲ್ಲಿಸಿದ ಸೇವೆ ಇಡೀ ಜಿಲ್ಲೆಗೆ ಮಾದರಿಯಾಗಿದೆ.

ಯೂನುಸ್ ಅವರ ಸಾಧನೆಯ ಹಿಂದೆ ಕ್ಷೇತ್ರ ಶಿಕ್ಷಣಾಧಿಕಾರಿಗಳ (BEO) ಸಮರ್ಥ ಮಾರ್ಗದರ್ಶನ ಹಾಗೂ ಇಲಾಖೆಯ ಉನ್ನತ ಅಧಿಕಾರಿಗಳ ಪ್ರೋತ್ಸಾಹ ದೊಡ್ಡದಿದೆ. ಇಲಾಖೆ ನೀಡುವ ಜವಾಬ್ದಾರಿಯನ್ನು ಅತ್ಯಂತ ಸೃಜನಶೀಲವಾಗಿ ನಿಭಾಯಿಸುತ್ತಿದ್ದ ಇವರು, ಪ್ರತಿಯೊಂದು ಹಂತದಲ್ಲೂ ಮುಖ್ಯಗುರುಗಳು ಮತ್ತು ಸಹೋದ್ಯೋಗಿ ಶಿಕ್ಷಕರನ್ನು ವಿಶ್ವಾಸಕ್ಕೆ ಪಡೆದು ಕೆಲಸ ಮಾಡುತ್ತಿದ್ದರು. ಶಿಕ್ಷಕ ಸ್ನೇಹಿ ಅಧಿಕಾರಿಯಾಗಿ ಇವರ ಕಾರ್ಯ ಇಂದಿಗೂ ಶಿಕ್ಷಕರ ವಲಯದಲ್ಲಿ ಹಸಿರಾಗಿದೆ.

ಒಬ್ಬ ಅಧಿಕಾರಿಯ ಸಾಧನೆಯನ್ನು ಅವರ ಹುದ್ದೆಗಿಂತಲೂ ಹೆಚ್ಚಾಗಿ ವಿದ್ಯಾರ್ಥಿಗಳು ಅವರಿಗೆ ನೀಡುವ ಪ್ರೀತಿಯ ಹೆಸರುಗಳು ಅಳೆಯುತ್ತವೆ. ಮಾನವಿ ತಾಲೂಕಿನಲ್ಲಿ ಶ್ರೀ ಮೊಹಮ್ಮದ್ ಅಬ್ದುಲ್ ಯೂನುಸ್ ಎನ್ನುವ ಹೆಸರಿಗಿಂತಲೂ, ವಿದ್ಯಾರ್ಥಿಗಳ ಪಾಲಿಗೆ ಅವರು 'ಎನ್ ಎಂ ಎಂ ಎಸ್ ಸರ್' ಮತ್ತು 'ಟಾರ್ಗೆಟ್ 625 ಸರ್' ಎಂದೇ ಚಿರಪರಿಚಿತ. ವಿದ್ಯಾರ್ಥಿಗಳ ನೆಚ್ಚಿನ 'NMMS' ಮತ್ತು 'Target-625' ಸರ್

**NMMS ನೋಡಲ್ ಅಧಿಕಾರಿ:** 8ನೇ ತರಗತಿ ಮಕ್ಕಳಿಗೆ 48,000 ವಿದ್ಯಾರ್ಥಿ ವೇತನ ತಂದುಕೊಡುವ ಓಒಒಖ ಪರೀಕ್ಷೆಗಾಗಿ ಶಾಲೆಗಳಿಗೆ ಭೇಟಿ ನೀಡಿ ಜಾಗೃತಿ ಮೂಡಿಸಿದ್ದರಿಂದ, ಕಳೆದ 5 ವರ್ಷಗಳಲ್ಲಿ ಪ್ರತಿ ವರ್ಷ 35ಕ್ಕೂ ಹೆಚ್ಚು ವಿದ್ಯಾರ್ಥಿಗಳು ಉತ್ತೀರ್ಣರಾಗುತ್ತಿದ್ದಾರೆ.

**SSLC ಪ್ರೇರಕ:** ಎಸ್‌ಎಸ್‌ಎಲ್‌ಸಿ ಪರೀಕ್ಷೆಯ ನೋಡಲ್ ಅಧಿಕಾರಿಯಾಗಿ ಇವರು ಸ್ವತಃ ಸಿದ್ಧಪಡಿಸಿದ 'ಟಾರ್ಗೆಟ್-625' ಪಿಪಿಟಿ ಮೂಲಕ ವಿದ್ಯಾರ್ಥಿಗಳಲ್ಲಿ ಆತ್ಮವಿಶ್ವಾಸ ತುಂಬಿದರು. ಇದರ ಫಲವಾಗಿ ತಾಲೂಕಿನ ನಾಲ್ವರು ವಿದ್ಯಾರ್ಥಿಗಳು ರಾಜ್ಯಕ್ಕೆ ದ್ವಿತೀಯ ಸ್ಥಾನ ಪಡೆದು ದಾಖಲೆ ಬರೆದಿದ್ದಾರೆ.

ದಾನಿಗಳ ನೆರವಿನಿಂದ ಶಾಲೆಗಳ ಮುಖಪುಟವನ್ನೇ ಬದಲಿಸಿದ ಇವರು:ನಗು ಫೌಂಡೇಶನ್: ಮಾಡಗಿರಿ ಶಾಲೆಗೆ 1.5 ಲಕ್ಷ ವೆಚ್ಚದ ಬಾಲಕಿಯರ ಶೌಚಾಲಯ ಹಾಗೂ 10ಕ್ಕೂ ಹೆಚ್ಚು ಶಾಲೆಗಳಿಗೆ ಕ್ರೀಡಾ ಸಾಮಗ್ರಿ.

**ಯೂತ್ ಫಾರ್ ಸೇವಾ:** ಆರು ಶಾಲೆಗಳ ಮಕ್ಕಳಿಗೆ ಎಜುಕೇಶನ್ ಕಿಟ್ ಮತ್ತು ಶಿಕ್ಷಕರಿಗೆ ವಿಶೇಷ ತರಬೇತಿ.ಬ್ಲಾಕ್ ಕಲರ್ ಫಾರ್ ಬ್ರೈಟ್ ಫ್ಯೂಚರ್: ಕಲ್ಲೂರು, ಮಾನವಿ ಮತ್ತು ಪೋತ್ನಾಳ ವಲಯದ ಎಲ್ಲಾ ಶಾಲೆಗಳ ಕಪ್ಪು ಹಲಗೆಗಳಿಗೆ ದಾನಿಗಳ ನೆರವಿನಿಂದ ಬಣ್ಣ ಬಳಿಯುವ ವಿನೂತನ ಕಾರ್ಯ.

**ದತ್ತು ಯೋಜನೆ:** ಕೃಷ್ಣನಗರ ಕಲ್ಲೂರು ಶಾಲೆಯನ್ನು ದತ್ತು ಪಡೆದು ಖಾಸಗಿ ಶಾಲೆಗಳಿಗೆ ಸವಾಲು ಹಾಕುವಂತೆ ಅಭಿವೃದ್ಧಿಪಡಿಸಿದ್ದು ಇವರ ಅತಿದೊಡ್ಡ ಸಾಧನೆ.ಯೂನುಸ್ ಅವರ ಕಾರ್ಯವೈಖರಿಯಿಂದ ಪ್ರೇರಣೆಗೊಂಡ ಮಾನವಿಯ ಗಫೂರ್ ಮೆಮೋರಿಯಲ್ ಎಜ್ಯುಕೇಷನಲ್ ಟ್ರಸ್ಟ್, ಶಿಕ್ಷಣ ಕ್ಷೇತ್ರಕ್ಕೆ ಅಪಾರ ಕೊಡುಗೆ ನೀಡುತ್ತಾ ಬಂದಿದೆ.

**ಕನ್ನಡ ಕಲಿಕಾ ಕ್ರಾಂತಿ:** ಈ ಟ್ರಸ್ಟ್ ಹಾಗೂ ರಾಯಚೂರಿನ ಕಲಾಂ ಎಜ್ಯುಕೇಷನ್ ಟ್ರಸ್ಟ್ ಸಹಯೋಗದೊಂದಿಗೆ 'ನನ್ನ ಶಾಲೆ ನನ್ನ ಕೊಡುಗೆ' ಕಾರ್ಯಕ್ರಮದಡಿಯಲ್ಲಿ ಕಳೆದ ಮೂರು ವರ್ಷಗಳಿಂದ 'ವಿದ್ಯಾರ್ಥಿಗಳಿಗೆ ಬನ್ನಿ ಕನ್ನಡ ಕಲಿಯೋಣ' ಎಂಬ ವಿಶೇಷ ಅಭಿಯಾನವನ್ನು ಆಯೋಜಿಸಲಾಗಿತ್ತು. ಈ ಯೋಜನೆಗಾಗಿ ಪ್ರತ್ಯೇಕ ಶಿಕ್ಷಕರನ್ನು ನೇಮಿಸಿ, ಅವರಿಗೆ ಟ್ರಸ್ಟ್ ವತಿಯಿಂದಲೇ ವೇತನ ನೀಡಿ ವಿದ್ಯಾರ್ಥಿಗಳಲ್ಲಿ ಕನ್ನಡ ಭಾಷೆಯ ಬಗ್ಗೆ ಆಸಕ್ತಿ ಮೂಡಿಸಿರುವುದು ಇವರ ದೂರದೃಷ್ಟಿಗೆ ಸಾಕ್ಷಿ.

**ಪ್ರತಿಭಾ ಪುರಸ್ಕಾರ:** ಎನ್‌ಎಂಎಂಎಸ್ ಪರೀಕ್ಷೆಯಲ್ಲಿ ಉತ್ತೀರ್ಣರಾದ ಬಡ ವಿದ್ಯಾರ್ಥಿಗಳನ್ನು ಪ್ರೋತ್ಸಾಹಿಸಲು ಕಳೆದ ನಾಲ್ಕು ವರ್ಷಗಳಿಂದ ಪ್ರತಿಭಾ ಪುರಸ್ಕಾರ ಕಾರ್ಯಕ್ರಮವನ್ನು ಈ ಟ್ರಸ್ಟ್ ಮೂಲಕ ಯಶಸ್ವಿಯಾಗಿ ನಡೆಸಿಕೊಂಡು ಬರಲಾಗುತ್ತಿದೆ.

**'ಅಕ್ಷರ ಟ್ರೋಫಿ' ಕ್ರಿಕೆಟ್ ಟೂರ್ನಿ:** ಶಿಕ್ಷಕರಲ್ಲಿ ಕ್ರೀಡಾ ಚೈತನ್ಯ ಯೂನುಸ್ ಅವರು ಕೇವಲ ಶೈಕ್ಷಣಿಕ ಚಟುವಟಿಕೆಗಳಿಗೆ ಸೀಮಿತವಾಗದೆ, ಶಿಕ್ಷಕರ ಮಾನಸಿಕ ಮತ್ತು ದೈಹಿಕ ಆರೋಗ್ಯದ ದೃಷ್ಟಿಯಿಂದ ರಜೆಯ ಅವಧಿಯಲ್ಲಿ 'ಅಕ್ಷರ ಟ್ರೋಫಿ' ಕ್ರಿಕೆಟ್ ಟೂರ್ನಿಯನ್ನು ಆಯೋಜಿಸುತ್ತಿದ್ದರು. ಇದು ಶಿಕ್ಷಕರ ವಲಯದಲ್ಲಿ ಅತ್ಯಂತ ಜನಪ್ರಿಯವಾಗಿದ್ದು, ಶಿಕ್ಷಕರಲ್ಲಿ ಅಡಗಿರುವ ಕ್ರೀಡಾ ಪ್ರತಿಭೆಗೆ ದೊಡ್ಡ ವೇದಿಕೆಯನ್ನು ಒದಗಿಸಿತು. ಈ ಮೂಲಕ ಶಿಕ್ಷಕರಲ್ಲಿ ಸ್ನೇಹಭಾವ ಮತ್ತು ಒಗ್ಗಟ್ಟನ್ನು ಮೂಡಿಸುವಲ್ಲಿ ಇವರು ಯಶಸ್ವಿಯಾಗಿದ್ದಾರೆ.

**ರಾಷ್ಟ್ರಮಟ್ಟದ ಗೌರವ:** ಪರಿಶಿಷ್ಟ ಪಂಗಡ ಇಲಾಖೆಯ 'ಆದಿ ಕರ್ಮಯೋಗಿ' ಅಭಿಯಾನದ ಜಿಲ್ಲಾ ಉತ್ತಮ ಸಂಪನ್ಮೂಲ ವ್ಯಕ್ತಿಯಾಗಿ ನವದೆಹಲಿಯಲ್ಲಿ ನಡೆದ ರಾಷ್ಟ್ರಪತಿಯವರ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದು ಇವರ 17 ವರ್ಷಗಳ ಸೇವೆಗೆ ಸಂದ ಗೌರವವಾಗಿದೆ. ಪ್ರಸ್ತುತ ಯರಮರಸ್ ಆದರ್ಶ ವಿದ್ಯಾಲಯದಲ್ಲಿ ಶಿಕ್ಷಕರಾಗಿ ಸೇವೆ ಸಲ್ಲಿಸುತ್ತಿರುವ ಇವರ ಶೈಕ್ಷಣಿಕ ಪಯಣ ಯಶಸ್ವಿಯಾಗಿ ಮುಂದುವರಿಯಲಿ.

# 2.69 ಲಕ್ಷ ರೂ.ಮೊತ್ತದ 19 ಗ್ರಾಂ.ಚಿನ್ನಾಭರಣ ಕಳವು

**ಕಲಬುರಗಿ,ಡಿ.27**–ಮಹಿಳೆಯೊಬ್ಬರ ವ್ಯಾನಿಟಿ ಬ್ಯಾಗಿನಲ್ಲಿ ಇದ್ದ 2.69 ಲಕ್ಷ ರೂ.ಮೊತ್ತದ 19 ಗ್ರಾಂ.ಬಂಗಾರದ ಆಭರಣ ಕಳವಾಗಿರುವ ಘಟನೆ ನಗರದ ಜನತಾ ಬಜಾರ್‌ದಲ್ಲಿ ನಡೆದಿದೆ. ನಗರದ ತಾರಫೈಲ ನಿರ್ಮಲಾ ಕಮಲಾಕರ್ ಶಿವನೂರ (55) ಎಂಬುವವರೆ ಬಂಗಾರದ ಆಭರಣ ಕಳೆದುಕೊಂಡಿದ್ದು, ಅವರು ಈ ಸಂಬಂಧ ಬ್ರಹ್ಮಪುರ ಪೊಲೀಸ್ ಠಾಣೆಯಲ್ಲಿ ದೂರು ಸಲ್ಲಿಸಿದ್ದಾರೆ. ನಿರ್ಮಲಾ ಅವರು ತಮ್ಮ ಬಳಿ ಇದ್ದ 20 ಗ್ರಾಂ.ಬಂಗಾರದ ಆಭರಣಗಳನ್ನು ಮಾರಾಟ ಮಾಡಿ ಹೊಸ ಬಂಗಾರದ ಆಭರಣಗಳನ್ನು ಖರೀದಿ ಮಾಡಲು ಸರಾಫ್ ಬಜಾರಿಗೆ ಹೋಗಿ ಹಳೆ ಬಂಗಾರದ ಆಭರಣಗಳ ಪೈಕಿ 11 ಗ್ರಾಂ.ಬಂಗಾರದ ತಾಳಿ ಮತ್ತು ಗುಂಡುಗಳನ್ನು ಬಂಗಾರದ ಅಂಗಡಿಯಲ್ಲಿ ಕೊಟ್ಟು ಅದರಲ್ಲಿ ತಾಳಿ ಹೊರತು ಪಡಿಸಿ ಉಳಿದ ಗುಂಡುಗಳನ್ನು ಕರಗಿಸಿದಾಗ 8 ಗ್ರಾಂ.ಆಗಿದೆ. 8 ಗ್ರಾಂ.ಬಂಗಾರದ ಗಟ್ಟಿಯನ್ನು ಮಾರಾಟ ಮಾರಾಟ ಮಾಡಲು ಹೋದಾಗ ಬಂಗಾರದ ಅಂಗಡಿಯವರ ಜೊತೆ ಹಣದ ವ್ಯವಹಾರ ಹೊಂದದೇ ಇರುವುದರಿಂದ ಆಭರಣಗಳನ್ನು ಚಿಕ್ಕ ಪರ್ಸನಲ್ಲಿ ಹಾಕಿ ವ್ಯಾನಿಟಿ ಬ್ಯಾಗಿನಲ್ಲಿ ಇಟ್ಟುಕೊಂಡು ಜನತಾ ಬಜಾರ್‌ಗೆ ಬಂದು ಹೂವು ಖರೀದಿ ಮಾಡುತ್ತಿದ್ದಾಗ ವ್ಯಾನಿಟಿ ಬ್ಯಾಗಿನಲ್ಲಿ ಇಟ್ಟಿದ್ದ 19 ಗ್ರಾಂ.ಬಂಗಾರದ ಆಭರಣಗಳು ಕಳವಾಗಿವೆ. ಈ ಸಂಬಂಧ ಬ್ರಹ್ಮಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ನಡೆದಿದೆ.

## ಇಂತಿ ನಿನ್ನ ಪ್ರೀತಿಯ ಮಾನಸ ಕಾದಂಬರಿ ಲೋಕಾರ್ಪಣ



**ಜೇವರ್ಗಿ :ಡಿ.27**– ಜೇವರ್ಗಿ ಪಟ್ಟಣದ ಡಾ. ಬಿಆರ್ ಅಂಬೇಡ್ಕರ್ ಸಭಾಂಗಣದಲ್ಲಿ ನಡೆದ ಸಾಹಿತಿ ಪೊಲೀಸ ಇಲಾಖೆಯ ಸಿಬ್ಬಂದಿಯವರಾದ ಈಶ್ವರ್, ಎ. ನಾಟಿಕರ್ ರವರ ಸ್ವ-ರಚಿತ ಕಾದಂಬರಿ ಇಂತಿ ನಿನ್ನ ಪ್ರೀತಿಯ ಮಾನಸ ಈ ಪುಸ್ತಕದ ಲೋಕಾರ್ಪಣೆ ಕಾರ್ಯಕ್ರಮವು ಜರುಗಿತು.

ಈ ಕಾರ್ಯಕ್ರಮದಲ್ಲಿ ಜೇವರ್ಗಿ ಪೊಲೀಸ್ ಠಾಣೆಯ ಸಿಪಿಐ ರಾಜಸಾಹೇಬ್ ನದಾಫ ಪುಸ್ತಕ ಲೋಕಾರ್ಪಣೆ ಕಾರ್ಯಕ್ರಮದಲ್ಲಿ ಮಾತನಾಡಿ ಕನ್ನಡ ಸಾಹಿತ್ಯ ಮತ್ತು ಪರಂಪರೆಗೆ ಬಹಳ ಹಿಂದಿನ ಕಾಲದ ಇತಿಹಾಸವಿದ್ದು, ಇದಕ್ಕೆ ಸಾಕ್ಷಿ ಎಂಬಂತೆ ಕನ್ನಡ ನಾಡು ನುಡಿಗೋಸ್ಕರ ಹಲವಾರು ಶರಣರು ಸಂತರು ಸೂಫಿಗಳು ಶಿವಶರಣೆಯರು ಲೇಖಕರು ಸಾಹಿತಿಗಳು ತಮ್ಮದೇ ಆದ ಸಾಹಿತ್ಯ ಲೋಕಕ್ಕೆ ಹಲವಾರು ಪುಸ್ತಕಗಳನ್ನ ವಚನಗಳನ್ನು ಹಾಡುಗಳನ್ನು ರಚಿಸುವ ಮೂಲಕ ಕೊಡುಗೆ ನೀಡಿದ್ದಾರೆ. ಇದಲ್ಲದೆ ಎಂಟು ಜ್ಞಾನಪೀಠ ಪ್ರಶಸ್ತಿಗಳನ್ನು ತಂದುಕೊಟ್ಟಿದ್ದಾರೆ ಇವತ್ತು ಕನ್ನಡ ಭಾಷೆಯಲ್ಲಿ ನಮ್ಮ ಇಲಾಖೆಯ ಸಿಬ್ಬಂದಿ ಈಶ್ವರ್, ಎ. ನಾಟಿಕರ್ ರವರು ಕಿರಿಯ ವಯಸ್ಸಿನಲ್ಲಿಯೇ ಸಾಹಿತ್ಯಕಾರರಾಗಿ ಒಳ್ಳೆಯ ವಿಚಾರಗಳನ್ನು ಹೊಂದಿ ಪುಸ್ತಕಗಳನ್ನು ಬಿಡುಗಡೆಗೊಳಿಸುತ್ತಿರುವುದು ಅತ್ಯಂತ ಹೆಮ್ಮೆಯ ವಿಷಯವಾಗಿದೆ. ಇಂದು ಬಿಡುಗಡೆಗೊಳ್ಳುತ್ತಿರುವ ಇಂತಿ ನಿನ್ನ ಪ್ರೀತಿಯ ಮಾನಸ ಎಂಬ ಪುಸ್ತಕವೂ ಬಹಳ ಅರ್ಥ ಪೂರ್ಣವಾಗಿದೆ ಇದನ್ನು ಇಂದಿನ ಯುವಜನರು ಓದಬೇಕು ಎಂದು ಪೊಲೀಸ್ ಜಿಲ್ಲಾ ಹೆಚ್ಚುವರಿ ವರಿಷ್ಠ ಅಧಿಕಾರಿ ಮೇಘಾ ಣ್ಣ ನವರು ಮಾತನಾಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಶ್ರೀ ಮಹಾಲಕ್ಷ್ಮೀ ಮಹಿಳಾ ಪದವಿ ಮಹಾ ವಿದ್ಯಾಲಯದ ಪ್ರಾಚಾರ್ಯರಾದ ಡಾ. ಧರ್ಮಣ್ಣ .ಕೆ. ಬಡಿಗೇರ್ ಮಾತನಾಡಿ ಅತ್ಯಂತ

ಕಿರಿಯ ವಯಸ್ಸಿನಲ್ಲಿ ಈಶ್ವರ್ ರವರು ತಮ್ಮ ವೃತ್ತಿ ಜೀವನದ ಪೊಲೀಸ್ ಇಲಾಖೆಯೊಂದಿಗೆ ಇದರ ಜೊತೆಗೆ ಸಾಹಿತ್ಯದಲ್ಲಿಯೂ ಕೂಡ ತುಂಬಾ ಆಸಕ್ತಿಯನ್ನು ಹೊಂದಿ ಒಳ್ಳೆಯ ಕಾದಂಬರಿ ಕವಿತೆ ಕವನಗಳನ್ನು ಬರೆಯುತ್ತಾ ಯುವ ಬರಹಗಾರರಾಗಿ ಸಾಹಿತ್ಯ ಕ್ಷೇತ್ರದಲ್ಲಿ ಗುರುತಿಸಿ ಕೊಳ್ಳುತ್ತಿದ್ದಾರೆ ಎಂದು ಮಾತನಾಡಿದರು.

ಈ ಸಂದರ್ಭದಲ್ಲಿ ಗುಲ್ಬರ್ಗ ವಿಶ್ವವಿದ್ಯಾನಿಲಯದ ಕುಲಪತಿಗಳಾದ ರಮೇಶ್ ಲಂಡನ್ ಎನ್ವರ್, ತಾಲೂಕ ದಂಡಾಧಿಕಾರಿಗಳಾದ ಮಲ್ಲಣ್ಣ ಯಲಗೋಡ, ಶ್ರೀಮತಿ ಕಲಾವತಿ ಮಾಜಿ ಜಿಲ್ಲಾ ಪಂಚಾಯತ್ ಸದಸ್ಯರಾದ ಚಂದ್ರಶೇಖರ್ ಹರನಾಳ, ದಲಿತ ಹಿರಿಯ ಮುಖಂಡರಾದ ಭೀಮರಾಯ ನಾಗನೂರ್, ತಾಲೂಕ ಕನ್ನಡ ಸಾಹಿತ್ಯ ಪರಿಷತ್ತು ಅಧ್ಯಕ್ಷರಾದ ಎಸ್ ಕೆ ಬಿರಾದರ್, ಕನ್ನಡ ಸಾಹಿತ್ಯ ಅಕಾಡೆಮಿಯ ಬೆಂಗಳೂರಿನ ಲಲಿತ ಕಲಾ ಅಕಾಡೆಮಿಯ ಬೆಂಗಳೂರಿನ ಸಾಹಿತಿಗಳಾದ ಅವರು. ಸಿದ್ದರಾಮ ಹೊನ್ನಕಲ್. ಡಾ.ಬಸವರಾಜ ಕಲೆಗಾರ್ ಯಾದಗಿರಿ ಜಿಲ್ಲಾ ಸಾಹಿತಿಗಳಾದ ಡಾ. ಗಾಳೆಪ್ಪ ಪೂಜಾರಿ, ಕಲಬುರ್ಗಿ ಗ್ರಾಮೀಣ ಉಪ ವಿಭಾಗ ಲೋಕೇಶ್ವರಪ್ಪ ಎನ್. ಮುರಾರ್ಜಿ ವಸತಿ ಶಾಲೆಯ ಪ್ರಾಂಶುಪಾಲರಾದ ಸುರೇಶ ತಡಿಬಿಡಿ, ಸರ್ಕಾರಿ ಮಹಿಳಾ ಪದವಿಪೂರ್ವ ಇತಿಹಾಸ ಉಪನ್ಯಾಸಕರ ಡಾ. ಗೋವಿಂದರಾಜ ಆಲ್ದಾಳ, ವರದಿಗಾರ ಮರೆಪ್ಪ ಬೇಗಾರ್ ಲಾಲಪ್ಪ ಎಮ ಯಶ್ವ ವಂತ ಮಂದೇವಾಲ ರವಿಚಂದ್ರ ಗುತ್ತೇದಾರ್, ಶ್ರೀ ಹರಿ ಕರಿಕಿಹಳ್ಳಿ, ರವಿ ಕುಳಗೇರಿ ಪ್ರಕಾಶ ಮಾರಡಗಿ ಜೇವರ್ಗಿ ಪೊಲೀಸ್ ಠಾಣೆಯ ಸಿಬ್ಬಂದಿಗಳು ಸೇರಿದಂತೆ ಅನೇಕರು ಇದ್ದರು ಈ ಕಾರ್ಯಕ್ರಮದ ನಿರೂಪಣೆಯನ್ನು ಯುವ ಲೇಖಕರಾದ ಸಿದ್ದಣ್ಣ ಪೂಜಾರಿ, ಜೇವರ್ಗಿ ಪೊಲೀಸ್ ಠಾಣೆಯ ಪೈಗಂಬರ್ ಸ್ವಾಗತಿಸಿದರು. ಬಸವರಾಜ್ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಆ ವಂದಿಸಿದರು.

# ಸಂಗಮನಾಥ ಸಕ್ಕರೆ ಕಾರ್ಖಾನೆ: ತೂಕದಲ್ಲಿ 560 ಕೆ.ಜಿ ಮೋಸ ಬಯಲು



**ವಿಜಯಪುರ, ಡಿ. 27**–ಸಿಂದಗಿ ತಾಲೂಕಿನ ಮನ್ನಾಪುರದ ಸಂಗಮನಾಥ ಸಕ್ಕರೆ ಕಾರ್ಖಾನೆಯಲ್ಲಿ ಅಧಿಕಾರಿಗಳ ತಪಾಸಣೆ ವೇಳೆಯಲ್ಲಿ ತೂಕದಲ್ಲಿ ಮೋಸ ನಡೆದಿರುವುದು ಪತ್ತೆಯಾಗಿದೆ.

ಬುಧವಾರ ಒಬ್ಬ ರೈತ ಸಂಶಯದಿಂದ ಹೊರಗಡೆ ತೂಕ ಮಾಡಿಕೊಂಡು ಬಂದಾಗ ಕಬ್ಬಿನ ತೂಕದಲ್ಲಿ 1000 ಕೆ,ಜಿ ತೂಕದಲ್ಲಿ ಮೋಸ ಆಗಿರುವುದು ಕಂಡು ಬಂದಿರುವ ಹಿನ್ನಲೆಯಲ್ಲಿ ಕಾರ್ಖಾನೆ ಸಿಬ್ಬಂದಿಯವರಿಗೂ ಹಾಗೂ ರೈತರ ನಡುವೆ ವಾಗ್ವಾದ ಉಂಟಾಯಿತು. ಈ ವೇಳೆ ಸ್ಥಳಕ್ಕೆ ಸಿಂದಗಿ ತಹಶಿಲ್ದಾರರು ಹಾಗೂ ಅಳತೆ ಮತ್ತು ತೂಕದ ಅಧಿಕಾರಿಗಳು ಬಂದಾಗ ಸರಿಯಾದ ತೂಕ ತೋರಿಸಿ ರೈತರಿಗೆ ಮೊಸ ಮಾಡಿರುವುದು ಮೇಲ್ನೋಟಕ್ಕೆ ಕಂಡು ಬಂದಿದೆ, ಅಧಿಕಾರಿಗಳು ಕೂಡಾ ಬಂದಾಗ 560 ಕೆ.ಜಿ ವ್ಯಾತ್ಯಾಸ ಬಂದಿದೆ. ಇದನ್ನು ತಪಾಸಣೆ ಮಾಡಬೇಕು ಎಂದರು.

ಈ ವಿಷಯವನ್ನು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಮುಖಂಡರಿಂದ ಬುಧವಾರ ಸಂಜೆ ಜಿಲ್ಲಾಧಿಕಾರಿಗಳ ಗಮನಕ್ಕೆ ತಂದಾಗ ಗುರುವಾರ ಸಂಬಂಧಿಸಿದ ಇಂಡಿ ಉಪವಿಭಾಗಾಧಿಕಾರಿಗಳು, ಸಿಂದಗಿ ತಹಶಿಲ್ದಾರರು, ಆಹಾರ ಇಲಾಖೆ ನಿರ್ದೇಶಕರು ಹಾಗೂ ಅಳತೆ ಮತ್ತು ಮಾಪನ ಇಲಾಖೆಯ ಅಧಿಕಾರಿ, ಸಿಂದಗಿ ಪಿ.ಎಸ್.ಐ ಅವರೊಂದಿಗೆ ಸ್ಥಳಕ್ಕೆ ಹೋಗಿ ಕೂಲಂಕುಷವಾಗಿ ಪರಿಶೀಲನೆ ಮಾಡಿ ವರದಿ ಕೊಡುವಂತೆ ಅಪರ ಜಿಲ್ಲಾಧಿಕಾರಿ ಸೋಮಲಿಂಗ ಗೆಣ್ಣೂರ ಅವರು ನಿರ್ದೇಶನ ನೀಡಿದ್ದರು.

ಗುರುವಾರ ಬೆಳಿಗ್ಗೆ ಸಂಬಂಧಿಸಿದ ಎಲ್ಲಾ ಅಧಿಕಾರಿಗಳು ಯಾವುದೇ ಫೋನ್ ಮೂಲಕ ತಿಳಿಸದೇ ಕಾರ್ಖಾನೆಗೆ ಭೇಟಿ ನೀಡಿ ಈ ಮೇಲಿನ ವಿಷಯಗಳನ್ನು ಹಂತ ಹಂತವಾಗಿ ಕೂಲಂಕುಷವಾಗಿ ಪರಿಶೀಲನೆ ಮಾಡಿ, ಹಲವಾರು ರೀತಿಯ ಪ್ರಯೋಗಗಳನ್ನು ಮಾಡಿ ಮೋಸ ಮಾಡಲು ಸಾಧ್ಯವಿರಬಹುದಾದ ಎಲ್ಲಾ ರೀತಿಯಲ್ಲಿ ತಪಾಸಣೆ ಮಾಡಿದರು. ಎಲ್ಲವೂ ಸರಿಯಾಗಿತ್ತು, ಕಬ್ಬು ಕಾರ್ಖಾನೆಗೆ ಬಂದ ನಂತರ ಒಟ್ಟು 3 ಬಾರಿ ತೂಕ ಮಾಡಿದಾಗ 3 ಬಾರಿ ಬೇರೆ ಬೇರ ತೂಕ ತೋರಿಸಲಾಗಿತ್ತು, ಹೊರಗಡೆಗಿಂತ 995 ಕೆ.ಜಿ ಕಡಿಮೆ ತೋರಿಸಿತ್ತು, ನಂತರದಲ್ಲಿ 560 ಕೆ.ಜಿ ಕಡಿಮೆ ತೋರಿಸಿತ್ತು, ಅಧಿಕಾರಿಗಳು ಬಂದ ನಂತರ ಎಲ್ಲವೂ ಸರಿಯಾಗಿ ತೋರಿಸಲಾಗಿತ್ತು, ಎಲ್ಲದಕ್ಕೂ ಸಿ,ಸಿ.ಟಿ.ವಿ ಕಣ್ಗಾವಲು ಹಾಗೂ ಅಧಿಕೃತ ಕಾರ್ಖಾನೆಯವರು ನೀಡಿರುವ ರಸೀದಿಯ ಮೇಲೆ 560 ಕೆ.ಜಿ ಮೋಸ ಆಗಿರುವುದಾಗಿ ಅಧಿಕಾರಿಗಳು ನಿರ್ಧರಿಸಿದರು

ನಾಳೆ ಕಾರ್ಖಾನೆಯರಿಗೆ ಇದನ್ನು ಕೇಳಿ ಒಂದು ನೋಟಿಸ್ ಕೊಟ್ಟು 2 ದಿನಗಳಲ್ಲಿ ಉತ್ತರ ಕೇಳುತ್ತೇವೆ. ಹಾಗೆ ಒಂದು ವಿಸ್ತೃತವಾದ ವರದಿಯನ್ನು ತಯಾರಿಸಿ ಜಿಲ್ಲಾಧಿಕಾರಿಗಳಿಗೆ ನೀಡುತ್ತೇವೆ. ನಂತರ ಈ ಕುರಿತು ಕಾನೂನು ಕ್ರಮ ಕುರಿತು ಚರ್ಚಿಸಿ ನಿರ್ಧರಿಸಲಾಗುವುದು ಎಂದರು.

ಈ ವೇಳೆ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ಜಿಲ್ಲಾಧ್ಯಕ್ಷ ಸಂಗಮೇಶ ಸಗರ ಅವರು ಮಾತನಾಡಿ, ಒಂದು ಟ್ರಾಕ್ಟರ್ ಕಬ್ಬಿನಿಂದ 560 ಕೆ.ಜಿ ಮೋಸ ಆಗಿದೆ ಎಂದಾದರೆ ಈ ಮೊದಲು ಬಂಧಿರುವ ಕಬ್ಬಿನ ತೂಕದಲ್ಲೂ ಮೋಸ ಆಗಿರುವ ಸಾಧ್ಯತೆಗಳಿವೆ. ಈ ಕುರಿತು ತಪಿತಸ್ಥರಿಗೆ ಸೂಕ್ತ ಕಾನೂನು ಕ್ರಮ ಜರುಗಿಸಬೇಕು. ಸಕ್ಕರೆ ಸಚಿವರ ಹೇಳಿಕೆಯಂತೆ 5 ಲಕ್ಷ ಬಹುಮಾನ ಕೊಡಬೇಕು ಎಂದು ಈ ಮೂಲಕ ಒತ್ತಾಯ ಮಾಡುತ್ತೇವೆ ಎಂದರು.

ಈ ವೇಳೆ ರೈತ ಮುಖಂಡರಾದ ಸಿದ್ರಾಮಪ್ಪ ರಂಜಣಗಿ, ಧರೆಪ್ಪಗೌಡ ಬಿರಾದಾರ, ಕ.ರ.ವೇ ರಾಜ್ಯ ಉಪಾಧ್ಯಕ್ಷ ಬಸವರಾಜ ತಾಳಿಕೋಟಿ, ರಾಘವೇಂದ್ರ ಹೂಗಾರ ಸೇರಿದಂತೆ ನೂರಾರು ರೈತರು ಇದ್ದರು.

## ಬದಲಾವಣೆ ನಮ್ಮಿಂದಲೇ ಪ್ರಾರಂಭವಾಗಲಿ : ಅಲ್ಲಾಪಟೇಲ್

**ಕಲಬುರಗಿ:ಡಿ.27:** ದೇಶ ನಮಗೇನು ಮಾಡಿದೆ ಎನ್ನುವುದಕ್ಕಿಂತ, ದೇಶಕ್ಕಾಗಿ ನಾವೇನೂ ಮಾಡಿದ್ದೇವೆ ಎಂಬುದು ಪ್ರಮುಖವಾಗಿದೆ. ದೇಶ, ಸಮಾಜ ಬದಲಾವಣೆಯಾಗುತ್ತಿಲ್ಲ ಎಂದು ದೂರುವವರು, ಮೊದಲು ಬದಲಾವಣೆ, ಸಮಾಜ ಸೇವೆ ತಮ್ಮಿಂದಲೇ ಪ್ರಾರಂಭಿಸಬೇಕು. ಆಗ ದೇಶದ ಅಭಿವೃದ್ಧಿ ಸಾಧ್ಯವಿದೆ ಎಂದು ನಿವೃತ್ತ ಉಪನ್ಯಾಸಕ ಅಲ್ಲಾಪಟೇಲ್ ಬಿರಾದಾರ ಮಾರ್ಮಿಕವಾಗಿ ಹೇಳಿದರು. ಜೇವರ್ಗಿ ಪಟ್ಟಣದ ಬಸವೇಶ್ವರ ವೃತ್ತದ ಸಮೀಪದ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಎನ್.ಎಸ್.ಎಸ್ ಘಟಕದ ವಾರ್ಷಿಕ ವಿಶೇಷ ಶಿಬಿರದ ನಾಲ್ಕನೇ ದಿನದ ಉಪನ್ಯಾಸದಲ್ಲಿ 'ಸದೃಢ ರಾಷ್ಟ್ರ ನಿರ್ಮಾಣದಲ್ಲಿ ಎನ್.ಎಸ್.ಎಸ್ ಪಾತ್ರ' ಎಂಬ ವಿಷಯ ಕುರಿತು ಅವರು ಮಾತನಾಡುತ್ತಿದ್ದರು.ವಿದ್ಯಾರ್ಥಿ ದಿಸೆಯಿಂದಲೇ ಸಂಸ್ಕಾರ, ಮಾನವೀಯ ಮೌಲ್ಯಗಳು, ಸೇವಾ ಮನೋಭಾವನೆಯನ್ನು ಬಿತ್ತುವ ಮೂಲಕ ಎನ್.ಎಸ್.ಎಸ್




ಸದೃಢ ರಾಷ್ಟ್ರ ನಿರ್ಮಾಣಕ್ಕೆ ಶಕ್ತಿಯುತವಾದ ಮಾನವ ಸಂಪನ್ಮೂಲವನ್ನು ನೀಡುತ್ತಿದೆ. ವಿದ್ಯಾರ್ಥಿಗಳು ರಾಷ್ಟ್ರೀಯ ಸೇವಾ ಯೋಜನೆಯಲ್ಲಿ ಸಕ್ರಿಯವಾಗಿ ಭಾಗವಹಿಸಬೇಕು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಉಪನ್ಯಾಸಕರಾದ ಅಸ್ಮಾ ಜಬೀನ್, ಅಲಿಯಾ ತಬಸ್ಸುಮ್, ಪ್ರದಸ ಪ್ರೇಮಾ ಸುರಪುರ, ಎನ್.ಎಸ್.ಎಸ್ ಅಧಿಕಾರಿ ಎಚ್.ಬಿ.ಪಾಟೀಲ್ ಹಾಗೂ ಶಿಬಿರಾರ್ಥಿಗಳು ಇದ್ದರು.

# ಕೇಂದ್ರದ ವಿರುದ್ಧ ಕೈ ಹೋರಾಟ



**ದೆಹಲಿಯಲ್ಲಿ ಇಂದು ನಡೆದ ಕಾಂಗ್ರೆಸ್ ಕಾರ್ಯಕಾರಿಣಿ ಸಭೆಯಲ್ಲಿ ಪಕ್ಷದ ಸೋನಿಯಾಗಾಂಧಿ, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ, ಜೈರಾಂ ರಮೇಶ್, ಅಂಬಿಕಾ ಸೋನಿ ಮತ್ತಿರರು ಭಾಗವಹಿಸಿದ್ದರು. ದೆಹಲಿಯಲ್ಲಿ ಸಿಡಬ್ಲ್ಯೂಸಿ ಸಭೆ**

**ನವದೆಹಲಿ, ಡಿ. 27–** ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯ ಹೆಸರನ್ನು ಬದಲಿಸಿರುವ ಕೇಂದ್ರ ಸರ್ಕಾರದ ವಿರುದ್ಧ ಭಾರತ್ ಜೋಡೋ ಯಾತ್ರೆ ಮಾದರಿಯಲ್ಲಿ ದೇಶವ್ಯಾಪಿ ಹೋರಾಟ ನಡೆಸಲು ಕಾಂಗ್ರೆಸ್ ಪಕ್ಷ ಮುಂದಾಗಿದೆ.ನವದೆಹಲಿಯಲ್ಲಿಂದು ನಡೆದಿರುವ ಕಾಂಗ್ರೆಸ್ ಪಕ್ಷದ ರಾಷ್ಟ್ರೀಯ ಕಾರ್ಯಕಾರಿಣಿಯಲ್ಲಿ ಮನರೇಗಾ ಯೋಜನೆಯ ಹೆಸರನ್ನು ಬದಲಿಸಿರುವುದನ್ನು ಖಂಡಿಸಿ ನಿರ್ಣಯ ಕೈಗೊಳ್ಳಲಾಗಿದ್ದು, ಕೇಂದ್ರದ ವಿರುದ್ಧ ಹೋರಾಟ ನಡೆಸುವ ಬಗ್ಗೆಯೂ ಚರ್ಚೆಗಳು ನಡೆದವು.ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರವು ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗಖಾತ್ರಿ ಯೋಜನೆಯ ಹೆಸರನ್ನು ಬದಲಿಸಿ ಬಿವಿ–ಜಿ ರಾಮ್ ಜಿ ಯೋಜನೆ ಎಂದು ಪುನರ್ ನಾಮಕರಣ ಮಾಡಿದ್ದು, ಇದನ್ನು ಕಾಂಗ್ರೆಸ್ ಪಕ್ಷ ಈಗಾಗಲೇ ಖಂಡಿಸಿದೆ.ನರೇಗಾ ಯೋಜನೆಯಿಂದ ಮಹಾತ್ಮಗಾಂಧಿ ಹೆಸರು ಕೈಬಿಟ್ಟಿರುವ ಕೇಂದ್ರದ ವಿರುದ್ಧ ದೇಶಾದ್ಯಂತ ಜನಜಾಗೃತಿ ಅಭಿಯಾನವನ್ನು ಕೈಗೊಳ್ಳಲು ಕಾಂಗ್ರೆಸ್ ಮುಂದಾಗಿದೆ.ಈ ಜನಜಾಗೃತಿ ಅಭಿಯಾನದ ರೂಪುರೇಷೆಗಳ ಬಗ್ಗೆ ಇಂದು ನಡೆದ ಪಕ್ಷದ ರಾಷ್ಟ್ರೀಯ ಕಾರ್ಯಕಾರಿಣಿಯಲ್ಲಿ ಸುದೀರ್ಘವಾಗಿ ಚರ್ಚೆ ನಡೆಸಲಾಗಿದೆ ಎಂದು ಕಾಂಗ್ರೆಸ್ ಮೂಲಗಳು ಹೇಳಿವೆ.

ಈ ಹಿಂದೆ ಕಾಂಗ್ರೆಸ್‌ನ ವರಿಷ್ಠ ರಾಹುಲ್‌ಗಾಂಧಿಯವರು ದೇಶಾದ್ಯಂತ ನಡೆಸಿದ ಭಾರತ್ ಜೋಡೋ ಯಾತ್ರೆಯ ಮಾದರಿಯಲ್ಲೇ ನರೇಗಾ ಯೋಜನೆಯ ಹೆಸರನ್ನು ಬದಲಿಸಿ ಮಹಾತ್ಮಗಾಂಧಿ ಹೆಸರನ್ನು ಕೈ ಬಿಟ್ಟಿರುವುದರ ವಿರುದ್ಧ ಹೋರಾಟ ನಡೆಸುವ ಬಗ್ಗೆಯೂ ರಾಷ್ಟ್ರೀಯ ಕಾರ್ಯಕಾರಿಣಿಯಲ್ಲಿ ಚರ್ಚೆಗಳು ನಡೆದಿದ್ದು, ಬರುವ ಜನವರಿಯಿಂದಲೇ ಈ ಹೋರಾಟವನ್ನು ಆರಂಭಿಸುವ ಬಗ್ಗೆಯೂ ಚರ್ಚೆಗಳು ನಡೆದವು ಎನ್ನಲಾಗಿದೆ.

ಕಾಂಗ್ರೆಸ್ ಕಾರ್ಯಕಾರಿಣಿ ಸಭೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಪಾಲ್ಗೊಂಡರು. ಆಂಧ್ರ ಪ್ರದೇಶ ಮುಖ್ಯಮಂತ್ರಿ ರೇವಂತ್ ರೆಡ್ಡಿ, ಹಿರಿಯ ನಾಯಕಿ ಮಾರ್ಗರೇಟ್ ಆಳ್ವಾ ಇದ್ದಾರೆ.

ಮತಗಳ್ಳತನದ ಮೂಲಕ ಕೇಂದ್ರದ ವಿರುದ್ಧ ದೇಶಾದ್ಯಂತ ಕಾಂಗ್ರೆಸ್ ಪಕ್ಷ ಹೋರಾಟ ನಡೆಸಿತ್ತು. ಆದರೆ ಈ ಹೋರಾಟಕ್ಕೆ ಇತ್ತೀಚೆಗೆ ಚುನಾವಣೆ ನಡೆದ ಬಿಹಾರದಲ್ಲಿ ನಿರೀಕ್ಷಿತ ಫಲ ಸಿಗದ ಕಾರಣ ಈಗ ನರೇಗಾ ಯೋಜನೆಯ ಹೆಸರು ಬದಲಾಯಿಸಿರುವುದರ ವಿರುದ್ಧ ಹೋರಾಟ ನಡೆಸಿ ಜನರ ಜೀವನಾಧಾರದ ಮೂಲಭೂತ ಸಮಸ್ಯೆಗಳನ್ನು ಮುಂದಿಟ್ಟುಕೊಂಡು ಕೇಂದ್ರದ ವಿರುದ್ಧ ಹೋರಾಟ ನಡೆಸುವ ತೀರ್ಮಾನಕ್ಕೆ ಕಾಂಗ್ರೆಸ್ ಪಕ್ಷ ಬಂದಿದೆ.ಬರುವ ವರ್ಷ ತಮಿಳು, ಕೇರಳ, ಪಶ್ಚಿಮಬಂಗಾಳ ಮತ್ತು ಅಸ್ಸಾಂ ವಿಧಾನಸಭೆಗಳಿಗೆ ಚುನಾವಣೆ ನಡೆಯಲಿದ್ದು, ಈ ಚುನಾವಣೆಗಳ ಮೇಲೆ ಕಣ್ಣಿಟ್ಟು ನರೇಗಾ ಹೆಸರು ಬದಲಾವಣೆ ಒಂದು ಸಾಧನವಾಗಿ ಬಳಸಿಕೊಂಡು ಬಿಜೆಪಿ ವಿರುದ್ಧ ಜನಾಭಿಪ್ರಾಯ ರೂಪಿಸಲು ಕಾಂಗ್ರೆಸ್ ಭಾರತ್ ಜೋಡೋ ಯಾತ್ರೆ ಮಾದರಿಯಲ್ಲೇ ನರೇಗಾ ಹೆಸರು ಬದಲಾವಣೆ ವಿರುದ್ಧ ಆಂದೋಲನ ನಡೆಸಲು ತೀರ್ಮಾನಿಸಿದೆ ಎಂದು ಹೇಳಲಾಗಿದೆ.

ಇಂಡಿ ಒಕ್ಕೂಟದಲ್ಲಿರುವ ಮಿತ್ರ ಪಕ್ಷಗಳ ಜತೆ ಸೇರಿಕೊಂಡು ದೇಶಾದ್ಯಂತ ನರೇಗಾ ಹೆಸರು ಬದಲಾವಣೆ ವಿರುದ್ಧ ಹೋರಾಟವನ್ನು ಕಾಂಗ್ರೆಸ್ ನಡೆಸಲಿದೆ ಎಂದು ಪಕ್ಷದ ಉನ್ನತ ಮೂಲಗಳು ತಿಳಿಸಿವೆ.ಲೋಕಸಭಾ ಚುನಾವಣೆಯ ನಂತರ ಸ್ವಲ್ಪ ಮಟ್ಟಿಗೆ ನಿಷ್ಕ್ರಿಯವಾಗಿರುವ ಇಂಡಿ ಒಕ್ಕೂಟವನ್ನು ಈ ಹೋರಾಟದ ಮೂಲಕ ಬಲಪಡಿಸುವ ಇರಾದೆಯೂ ಕಾಂಗ್ರೆಸ್‌ಗೆ ಇದೆ. ಹಾಗಾಗಿ ನರೇಗಾ ವಿರುದ್ಧದ ಹೋರಾಟದಲ್ಲಿ ಇಂಡಿ ಮಿತ್ರ ಪಕ್ಷಗಳನ್ನು ಒಗ್ಗೂಡಿಸಿಯೇ ಹೋರಾಟ ನಡೆಸಲಾಗುವುದು ಎಂದು ಕಾಂಗ್ರೆಸ್ ಮೂಲಗಳು ವಿವರಿಸಿವೆ. ನರೇಗಾ ಯೋಜನೆಯಿಂದ ಮಹಾತ್ಮಗಾಂಧಿ ಹೆಸರನ್ನು ಕೈಬಿಟ್ಟಿರುವುದರ ವಿರುದ್ಧ ಕಾಂಗ್ರೆಸ್ ಪಕ್ಷ ಈಗಾಗಲೇ ತನ್ನ ಆಡಳಿತ ಇರುವ ಕರ್ನಾಟಕ ಸೇರಿದಂತೆ ಹಲವು ರಾಜ್ಯಗಳಲ್ಲಿ ಪ್ರತಿಭಟನೆ, ಧರಣಿ ನಡೆಸಿದೆ.ದೆಹಲಿಯ ಸಂಸತ್ ಭವನದ ಹೊರಗೂ ಕಾಂಗ್ರೆಸ್ ಪಕ್ಷ ನರೇಗಾ ಯೋಜನೆಯ ಹೆಸರು ಬದಲಾವಣೆ ವಿರುದ್ಧ ಪ್ರತಿಭಟನೆ ನಡೆಸಿತ್ತು. ಈಗ ಈ ಹೋರಾಟವನ್ನು ದೇಶವ್ಯಾಪಿ ನಡೆಸಲು ಕಾಂಗ್ರೆಸ್ ತೀರ್ಮಾನಿಸಿದೆ.ದೆಲಿಯಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ನೇತೃತ್ವದಲ್ಲಿ ನಡೆದ ರಾಷ್ಟ್ರೀಯ ಕಾರ್ಯಕಾರಿಣಿಯಲ್ಲಿ ಈ ಬಗ್ಗೆ ತೀರ್ಮಾನ ಕೈಗೊಳ್ಳಲಾಗಿದೆ ಎಂದು ಹೇಳಲಾಗಿದೆ.

ಈ ರಾಷ್ಟ್ರೀಯ ಕಾರ್ಯಕಾರಿಣಿಯಲ್ಲಿ ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್‌ಗಾಂಧಿ, ಕಾಂಗ್ರೆಸ್ ಅಧಿನಾಯಕಿ ಸೋನಿಯಾಗಾಂಧಿ, ಪ್ರಿಯಾಂಕಗಾಂಧಿ ಸೇರಿದಂತೆ ಬಹುತೇಕ ಎಲ್ಲಾ ಪ್ರಮುಖ ನಾಯಕರುಗಳು ಭಾಗವಹಿಸಿದ್ದರು. ಕರ್ನಾಟಕದ ಮುಖ್ಯಮಂತ್ರಿ ಸಿದ್ದರಾಮಯ್ಯ ಸಹ ರಾಷ್ಟ್ರೀಯ ಕಾರ್ಯಕಾರಿಣಿಯಲ್ಲಿ ಪಾಲ್ಗೊಂಡಿದ್ದರು.

**ಗೊಂದಲಗಳಿಗೆ ಹೈಕಮಾಂಡ್ ಶೀಘ್ರ ತೆರೆ–**ದೆಹಲಿಯಲ್ಲಿ ಇಂದು ನಡೆದಿರುವ ಕಾಂಗ್ರೆಸ್‌ನ ರಾಷ್ಟ್ರೀಯ ಕಾರ್ಯಕಾರಿಣಿ ಸಭೆಯಲ್ಲಿ ಪಾಲ್ಗೊಂಡಿರುವ ಮುಖ್ಯಮಂತ್ರಿ ಸಿದ್ದರಾಮಯ್ಯನವರು ರಾಜ್ಯ ಕಾಂಗ್ರೆಸ್‌ನ ಅಧಿಕಾರ ಹಂಚಿಕೆಯ ಜಟಾಪಟಿಯ ಗೊಂದಲಗಳ ನಿವಾರಣೆ ಸಂಬಂಧ ವರಿಷ್ಠರ ಜತೆ ಚರ್ಚೆ ನಡೆಸಲಿದ್ದು, ರಾಜ್ಯ ಕಾಂಗ್ರೆಸ್‌ನ ಗೊಂದಲಗಳ ಬಗ್ಗೆ ವರಿಷ್ಠರು ಸದ್ಯದಲ್ಲೇ ತೆರೆ ಎಳೆಯುವ ಸಾಧ್ಯತೆಗಳಿವೆ.

ದೆಹಲಿಯಲ್ಲಿರುವ ನಡೆದಿರುವ ರಾಷ್ಟ್ರೀಯ ಕಾರ್ಯಕಾರಿಣಿಯಲ್ಲಿ ಭಾಗಿಯಾಗಿರುವ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಎಐಸಿಸಿ ಪ್ರಧಾನ ಕಾರ್ಯದರ್ಶಿಗಳಾದ ಕೆ.ಸಿ. ವೇಣುಗೋಪಾಲ್ ಮತ್ತು ರಣದೀಪ್ ಸಿಂಗ್ ಸುರ್ಜೇವಾಲಾ ರವರ ಜತೆ ಸಭೆಯ ಸಂದರ್ಭದಲ್ಲಿ ಮಾತನಾಡಿ ರಾಜ್ಯ ಕಾಂಗ್ರೆಸ್‌ನ ಅಧಿಕಾರ ಹಂಚಿಕೆಯ ಜಟಾಪಟಿಗೆ ತೆರೆ ಎಳೆಯುವ ಬಗ್ಗೆ ಚರ್ಚೆ ನಡೆಸಿದ್ದಾರೆ ಎಂದು ಹೇಳಲಾಗಿದೆ.ಅಧಿಕಾರ ಹಂಚಿಕೆಯ ಗೊಂದಲಗಳನ್ನು ನಿವಾರಿಸಲು ರಾಹುಲ್‌ಗಾಂಧಿಯವರೇ ಅಂತಿಮ ತೀರ್ಮಾನ ಕೈಗೊಳ್ಳಲಿದ್ದಾರೆ. ಹಾಗಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಕಾರ್ಯಕಾರಿಣಿ ಸಭೆಯ ನಂತರ ರಾಹುಲ್‌ಗಾಂಧಿ ಹಾಗೂ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆಯವರ ಜತೆಯೂ ಚರ್ಚೆ ನಡೆಸುವ ಸಾಧ್ಯತೆಗಳಿವೆ.ರಾಜ್ಯ ಕಾಂಗ್ರೆಸ್‌ನ ಗೊಂದಲಗಳನ್ನು ನಿವಾರಿಸುವ ಬಗ್ಗೆ ರಾಹುಲ್ ಗಾಂಧಿಯವರು



ಯಾವ ತೀರ್ಮಾನ ಕೈಗೊಳ್ಳುತ್ತಾರೆ ಎಂಬುದು ಕುತೂಹಲ ಮೂಡಿಸಿದ್ದು, ಈ ಎಲ್ಲಾ ಗೊಂದಲಗಳಿಗೂ ಸದ್ಯದಲ್ಲೇ ಹೈಕಮಾಂಡ್ ತೆರೆ ಎಳೆಯುವ ಕೆಲಸ ಮಾಡಲಿದೆ ಎಂದು ಕಾಂಗ್ರೆಸ್ ಮೂಲಗಳು ಹೇಳಿವೆ.ದೆಹಲಿಯಲ್ಲಿರುವ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಅಧಿಕಾರ ಹಂಚಿಕೆಗೆ ಸಂಬಂಧಿಸಿದಂತೆ ಎಲ್ಲ ವಿದ್ಯಮಾನಗಳನ್ನು ವರಿಷ್ಠರ ಗಮನಕ್ಕೆ ತಂದಿದ್ದಾರೆ. ಹಾಗಾಗಿ ವರಿಷ್ಠರ ತೀರ್ಮಾನದತ್ತ ಈಗ ಎಲ್ಲರ ಚಿತ್ತ ನೆಟ್ಟಿದೆ.

ಕಾಂಗ್ರೆಸ್‌ನ ರಾಷ್ಟ್ರೀಯ ಕಾರ್ಯಕಾರಿಣಿಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯನವರ ಜತೆ ಹಿರಿಯ ನಾಯಕರುಗಳಾದ ಬಿ.ಕೆ. ಹರಿಪ್ರಸಾದ್, ಮಾಜಿ ಮುಖ್ಯಮಂತ್ರಿ ವೀರಪ್ಪಮೊಯ್ಲಿ, ಸಂಸದ ನಾಸೀರ್ ಹುಸೇನ್ ಪಾಲ್ಗೊಂಡಿದ್ದಾರೆ.

# ಹೆಸರಘಟ್ಟ ಕೆರೆಯಲ್ಲಿ ತ್ಯಾಜ್ಯ ಸೇರದಂತೆ ಎಚ್ಚರಿಕೆ ವಹಿಸಿ: ಖಂಡ್ರೆ



ಮೊದಲನೇಯ ಪುಟದಿಂದ

**ಬೆಂಗಳೂರು, ಡಿ.27–** ಸರ್ಕಾರ ಕೆಲವು ತಿಂಗಳ ಹಿಂದೆ ಸಂರಕ್ಷಿತ ಹುಲ್ಲುಗಾವಲು ಎಂದು ಘೋಷಿಸಿರುವ ಹೆಸರುಘಟ್ಟ ಕೆರೆ ಸೇರಿದಂತೆ 5678 ಎಕರೆ ಹುಲ್ಲುಗಾವಲು ಪ್ರದೇಶಕ್ಕೆ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಅವರಿಂದು ಭೇಟಿ ನೀಡಿ ಪರಿಶೀಲನೆ ನಡೆಸಿದರು.

ವರ್ಷದಲ್ಲಿ 10 ಲಕ್ಷ ಜನರಿಗೆ ನೀರು ಪೂರೈಸುವ ಸಾಮರ್ಥ್ಯವಿರುವ ಹೆಸರುಘಟ್ಟ ಕೆರೆಗೆ ಗೃಹ ತ್ಯಾಜ್ಯವಾಗಲೀ, ಕೈಗಾರಿಕಾ ತ್ಯಾಜ್ಯವಾಗಲೀ ಸೇರದಂತೆ ಎಚ್ಚರಿಕೆ ವಹಿಸಬೇಕು, ಅರ್ಕಾವತಿ ನದಿ ಮಲಿನವಾಗದಂತೆ ಎಚ್ಚರಿಕೆ ವಹಿಸಬೇಕು ಎಂದು ತಿಳಿಸಿದರು.ನೈಸರ್ಗಿಕವಾಗಿ ಬೆಳೆದಿರುವ ಹುಲ್ಲುಗಾವಲಿನ ಸಂರಕ್ಷಣೆಯ ಜೊತೆಗೆ ಸಂವರ್ಧನೆಯನ್ನೂ ಮಾಡಬೇಕು, ಸುತ್ತಮುತ್ತಲ ಗ್ರಾಮಗಳ ಜನರ ದನಕರು, ಮೇಕೆ ಮೇಯಲು ಮುಕ್ತ ಅವಕಾಶ ಇರಬೇಕು, ಸ್ಥಳೀಯ ಗ್ರಾಮ ಪಂಚಾಯ್ತಿಗಳ ಮತ್ತು ಸಾರ್ವಜನಿಕರ ಸಹಕಾರ ಪಡೆದು ಈ ಪ್ರದೇಶ ಸಂರಕ್ಷಣೆ ಮಾಡುವಂತೆ ತಿಳಿಸಿದರು.

ಹುಲ್ಲುಗಾವಲು ಪಕ್ಷಿಗಳ ಸಂತಾನೋತ್ಪತ್ತಿಗೆ ಮಹತ್ವದ ತಾಣಗಳಾಗಿದ್ದು, ಇಲ್ಲಿ ಜಲ ಮೂಲಗಳೂ ಇರುವ ಹಿನ್ನೆಲೆಯಲ್ಲಿ ಪಕ್ಷಿಗಳಿಗೆ ಗೂಡು ಕಟ್ಟಲು ಹೊಳೆ ಮತ್ತಿ ಹಾಗೂ ಆಹಾರಕ್ಕಾಗಿ ಹಣ್ಣಿನ ಗಿಡಗಳು ಸೇರಿದಂತೆ ವಿವಿಧ ಸ್ಥಳೀಯ ಪ್ರಭೇದದ ಮರಗಿಡಗಳನ್ನು ಸುತ್ತಲೂ ಬೆಳೆಸುವಂತೆ ನಿರ್ದೇಶನ ನೀಡಿದರು.

ಸಣ್ಣ ನೀರಾವರಿ ಇಲಾಖೆ, ಬೆಂಗಳೂರು ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಹಾಗೂ ಸ್ಥಳೀಯ ಸಂಸ್ಥೆಗಳ ಸಹಕಾರದೊಂದಿಗೆ ಹೆಸರುಘಟ್ಟ ಪ್ರದೇಶದ ಸಮಗ್ರ ಸಂರಕ್ಷಣೆ ಹಾಗೂ ಅಭಿವೃದ್ಧಿಗೆ ಸಿಎಸ್‌ಆರ್ ನಿಧಿ ಬಳಕೆ ಮಾಡಿಕೊಳ್ಳಲು ಮತ್ತು ಅರಣ್ಯ ಇಲಾಖೆಯಿಂದ ಇದಕ್ಕಾಗಿ ಹಣ ಮೀಸಲಿಡಲು ಕಾರ್ಯಯೋಜನೆ ರೂಪಿಸುವಂತೆ ಸ್ಥಳದಲ್ಲಿ ಹಾಜರಿದ್ದ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಮತ್ತು ಅರಣ್ಯ ಪಡೆ ಮುಖ್ಯಸ್ಥರಾದ ಮೀನಾಕ್ಷಿ ನೇಗಿ ಅವರಿಗೆ ಸೂಚಿಸಿದರು.

ಈ ಸಂದರ್ಭದಲ್ಲಿ ಎಪಿಸಿಸಿಎಫ್ ಕುಮಾರ್ ಪುಷ್ಕರ್, ಬೆಂಗಳೂರು ಡಿಸಿಎಫ್ ರವೀಂದ್ರ ಕುಮಾರ್ ಎನ್. ಮತ್ತಿತರರು ಹಾಜರಿದ್ದರು.

# ಕನ್ನಡದ ರಾಷ್ಟ್ರೀಯತೆ ಕಾಪಾಡಿಕೊಳ್ಳಬೇಕಿದೆ




**ಮೈಸೂರು: ಡಿ.27–** ಕನ್ನಡದ ಹೆಗಲ ಮೇಲೆ ಕುಳಿತು ಸವಾರಿ ನಡೆಸುವ ಭಾಷೆಗಳ ಬಗ್ಗೆ ಎಚ್ಚರ ವಹಿಸುವ ಮೂಲಕ ಕನ್ನಡ ರಾಷ್ಟ್ರೀಯತೆಯನ್ನು ಜೋಪಾನವಾಗಿ ಕಾಪಾಡಿಕೊಳ್ಳಬೇಕಾದ ಹೊಣೆ ನಮ್ಮದು ಎಂದು ಶಾಸಕ ಕೆ.ಹರೀಶ್ ಗೌಡ ಸಲಹೆ ನೀಡಿದರು.

ನಗರದ ಪುರಭವನದಲ್ಲಿ ಕರ್ನಾಟಕ ರಾಜ್ಯ ಅಹಿಂದ ಒಕ್ಕೂಟ ವತಿಯಿಂದ ಆಯೋಜಿಸಿದ್ದ ಪ್ರಥಮ ವರ್ಷದ ಕನ್ನಡ ರಾಜ್ಯೋತ್ಸವ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಕನ್ನಡ ನಮ್ಮ ನಾಡಿನ ಹೆಮ್ಮೆಯ ಭಾಷೆ. ಇದು ಹಲವಾರು ಭಾಷೆಗಳಿಗೆ ತಾಯಿಯಾಗಿದೆ. ನೆರೆ ರಾಜ್ಯದವರನ್ನು ಪ್ರೀತಿಯಿಂದ ಕಾಣುವ ಜನರು ಕನ್ನಡಿಗರು. ಇಂತಹ ನಾಡಿನಲ್ಲಿ ಹುಟ್ಟಿದ ನಾವು ಧನ್ಯರು ಎಂದು ಹೇಳಿದರು.

ಅಲಂಕಾರ ನೋಡಿ ಸಮ್ಮೇಳನದಂತೆ ಭಾಸವಾಯಿತು. ಈ ಕಾರ್ಯಕ್ರಮ ಕೇವಲ ನವೆಂಬರ್ ತಿಂಗಳಿಗೆ ಮಾತ್ರ ಸೀಮಿತವಾಗಿದೇ ವರ್ಷದ ಕೊನೆಯಲ್ಲು ಆಚರಿಸುತ್ತಿರುವುದು ಸಂತೋಷವಾಗುತ್ತಿದೆ. ಪ್ರತಿದಿನ ಕನ್ನಡ ನಮ್ಮ ಮನದಲ್ಲಿ ಹಚ್ಚ ಹಸಿರಾಗಿರಬೇಕು. ನಾಡುನುಡಿಗೆ ದುಡಿದವರನ್ನು ಗುರುತಿಸಿ ರಾಜ್ಯೋತ್ಸವ ವೇದಿಕೆಗಳಿಗೆ ಕರೆತಂದು ಸನ್ಮಾನಿಸುತ್ತಿವೆ. ಕನ್ನಡ ಸಂಘಟನೆಗಳು ಮಾತ್ರವೇ ಅಲ್ಲ, ಸರ್ಕಾರವೂ ದೊಡ್ಡ ಮಟ್ಟದಲ್ಲಿ ರಾಜ್ಯೋತ್ಸವ ಆಚರಿಸುತ್ತಿದೆ. ವರ್ಷದಿಂದ ವರ್ಷಕ್ಕೆ ರಾಜ್ಯೋತ್ಸವದ ಸಂಭ್ರಮ ಇಮ್ಮಡಿಗೊಳ್ಳುತ್ತಿದೆ ಎಂದು ಹೇಳಿದರು.

ಕನ್ನಡ ಎಂಬುದು ಕನ್ನಡಿಗರಿಗಲ್ಲದೆ ಭಾರತಕ್ಕೆ ಹಾಗೂ ವಿಶ್ವಕ್ಕೆ ಬೇಕಾಗಿರುವ ಭಾಷೆ. ಕನ್ನಡದ ಪರಂಪರೆ ಇಡೀ ಜಗತ್ತಿಗೆ ಸಾರುವಂತಹದ್ದು. ಕನ್ನಡದ ಸಂಸ್ಕೃತಿ, ಕಲೆ, ಸಾಹಿತ್ಯ, ಭಾಷೆ ಮತ್ತು ಇತಿಹಾಸ ವಿಶ್ವಕ್ಕೆ ಪಸರಿಸುವಂತಹದ್ದು. ಕನ್ನಡ ಭಾಷೆಗೆ ಎರಡು ಸಾವಿರ ವರ್ಷಗಳ ಇತಿಹಾಸವಿದೆ. ಇಂತಹ ಭಾಷೆಯನ್ನು ಉಳಿಸಿಕೊಂಡು ಹೋಗುವುದು ಕನ್ನಡಿಗರ ಮೇಲಿದೆ. ರಾಜ್ಯೋತ್ಸವವನ್ನು ನವೆಂಬರ್ ತಿಂಗಳಿಗೆ ಸೀಮಿತಗೊಳಿಸದೆ ವರ್ಷಪೂರ ಆಚರಣೆ ಮಾಡುವ ಮೂಲಕ ಭಾಷೆ ಜೀವಂತಗೊಳಿಸುತ್ತಿರುವುದು ಸಂತೋಷದ ವಿಷಯ ಎಂದರು.

ಮುಡಾ ಮಾಜಿ ಅಧ್ಯಕ್ಷ ಎಚ್.ವಿ.ರಾಜೀವ್ ಮಾತನಾಡಿ ಸಂಸ್ಕೃತಿ ಮತ್ತು ಭಾಷೆಗೆ ಸಂಬಂಧವಿದೆ. ಇದನ್ನು ಬಹುತ್ವದ ನೆಲೆಯಲ್ಲೇ ಅರ್ಥ ಮಾಡಿಕೊಂಡು ಮುನ್ನಡೆಯಬೇಕು. ಇವತ್ತಿನ ತಂತ್ರಜ್ಞಾನವನ್ನು ಕನ್ನಡದ ಬೆಳವಣಿಗೆಗೆ ಪೂರಕವಾಗಿ ಬೆಳೆಸಬೇಕಾದ ಜಾಗೃತಿ ನಮ್ಮಲ್ಲಿರಲಿ. ಭಾಷೆ ಜತೆಗೆ ಭೂಷಣ ಇರುತ್ತದೆ. ಅದರೊಂದಿಗೆ ಸಂಸ್ಕೃತಿಯೂ ಬೆಸದುಕೊಂಡಿರುತ್ತದೆ. ಭಾಷೆ ಕಳೆದುಕೊಂಡರೆ ಭೂಷಣ ಮತ್ತು ಸಂಸ್ಕೃತಿ ಎರಡನ್ನೂ ಕಳೆದುಕೊಳ್ಳುತ್ತೇವೆ. ಹಾಗಾಗಿ ಎಲ್ಲಾ ಕನ್ನಡಪರ ಸಂಘಟನೆಗಳು ಒಟ್ಟಾಗಿ ಭಾಷೆಗೆ ಭವಿಷ್ಯದಲ್ಲಿ ಇರುವಂತಹ ಸವಾಲುಗಳ ಬಗ್ಗೆ ವರ್ತಮಾನದಲ್ಲಿ ಅವಲೋಕನ ಮಾಡಬೇಕಾದ ಅವಶ್ಯಕತೆ ಇದೆ ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದಲ್ಲಿ ವಿವಿಧ ಸ್ಪರ್ದೆಗಳ ವಿಜೇತರಿಗೆ ಎಪಿಎನ್ ಪ್ರಾಪರ್ಟಿಸ್ ಮಾಲೀಕ ಎ.ಪಿ.ನಾಗೇಶ್ ಬಹುಮಾನ ವಿತರಣೆ ಮಾಡಿದರು. ನಗರಪಾಲಿಕೆ ಮಾಜಿ ಸದಸ್ಯ ಸತೀಶ್, ಮೈಮುಲ್ ಮಾಜಿ ನಿರ್ದೇಶಕ ಅಶೋಕ್, ಎಸ್‌ಸಿ, ಎಸ್‌ಟಿ ಉದ್ಯಮಿದಾರರ ಸಹಕಾರ ಸಂಘದ ರಾಜ್ಯಾಧ್ಯಕ್ಷ ಆರ್.ಮಂಜುನಾಥ್, ಸ್ಕೂಲ್ ಆಫ್ ಲಾ ನಿರ್ದೇಶಕ ಮಾರುತಿ ಮತ್ತಿತರರು ಇದ್ದರು.

# ಡಿಜಿಟಲ್ ಜನಗಣತಿಗೆ ಸಿದ್ಧತೆ ಪೂರ್ಣ

ಮೊದಲನೇಯ ಪುಟದಿಂದ

**ನವದೆಹಲಿ,ಡಿ.27–**2027 ರ ಭಾರತದ ಜನಗಣತಿಯ ಮೊದಲ ಹಂತದ ಪೂರ್ವಭಾವಿ ಪರೀಕ್ಷೆ ಯಶಸ್ವಿಯಾಗಿ ಪೂರ್ಣಗೊಂಡಿದೆ. ಇದು ದೇಶದ ಮೊದಲ ಡಿಜಿಟಲ್ ಜನಗಣತಿಯತ್ತ ಒಂದು ಪ್ರಮುಖ ಹೆಜ್ಜೆಯಾಗಿದೆ. ಏಪ್ರಿಲ್ 2026 ರಿಂದ ಪ್ರಾರಂಭವಾಗುವ ಮೊದಲ ಹಂತವು ಮನೆ ಪಟ್ಟಿ ಮತ್ತು ವಸತಿ ಜನಗಣತಿಯನ್ನು ಒಳಗೊಂಡಿರುತ್ತದೆ, ಆದರೆ ಜನಗಣತಿಯ ಎರಡನೇ ಹಂತವನ್ನು ಫೆಬ್ರವರಿ 2027 ರಲ್ಲಿ ನಡೆಸಲಾಗುವುದು.

ಸರ್ಕಾರಿ ಅಧಿಕಾರಿಗಳ ಪ್ರಕಾರ, ಈ ಡಿಜಿಟಲ್ ಜನಗಣತಿಗಾಗಿ ಉಪ–ಜಿಲ್ಲೆ, ಜಿಲ್ಲೆ ಮತ್ತು ರಾಜ್ಯ ಮಟ್ಟದಲ್ಲಿ ವ್ಯಾಪಕ ಸಿದ್ಧತೆಗಳು ನಡೆಯುತ್ತಿವೆ. ಲಕ್ಷಾಂತರ ಕ್ಷೇತ್ರ ಸಿಬ್ಬಂದಿಯ ನಿಯೋಜನೆ, ದತ್ತಾಂಶ ಸಂಗ್ರಹಣೆಗಾಗಿ ಮೊಬೈಲ್ ಅಪ್ಲಿಕೇಶನ್‌ಗಳ ಬಳಕೆ ಮತ್ತು ಡಿಜಿಟಲ್ ಅಭಿಯಾನದ ಸುರಕ್ಷತೆಯಂತಹ ನಿರ್ಣಾಯಕ ವಿಷಯಗಳ ಬಗ್ಗೆ ಚರ್ಚಿಸಲಾಗಿದೆ. ಏಪ್ರಿಲ್ ನಿಂದ ಸೆಪ್ಟೆಂಬರ್ 2026 ರವರೆಗೆ ನಿಗದಿಯಾಗಿರುವ ಮೊದಲ ಹಂತದ ಸುಗಮ ನಡವಳಿಕೆಗಾಗಿ, ಎಲ್ಲಾ ಹಂತಗಳಲ್ಲಿ ಜನಗಣತಿ ಅಧಿಕಾರಿಗಳನ್ನು ನಿಯೋಜಿಸಲಾಗುವುದು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

**2027 ರ ಜನಗಣತಿಯ ಎರಡು ಹಂತಗಳು–**2027 ರ ಜನಗಣತಿಯನ್ನು ಎರಡು ಹಂತಗಳಲ್ಲಿ ನಡೆಸಲಾಗುವುದು. ಮನೆ ಪಟ್ಟಿ ಮತ್ತು ವಸತಿ ಜನಗಣತಿಯನ್ನು ಒಳಗೊಂಡಿರುವ ಮೊದಲ ಹಂತವು ಏಪ್ರಿಲ್ ನಿಂದ ಸೆಪ್ಟೆಂಬರ್ 2026 ರವರೆಗೆ ನಡೆಯಲಿದೆ. ಜಮ್ಮು ಮತ್ತು ಕಾಶ್ಮೀರ, ಹಿಮಾಚಲ ಪ್ರದೇಶ ಮತ್ತು ಉತ್ತರಾಖಂಡದ ಹಿಮದಿಂದ ಆವೃತವಾದ ಪ್ರದೇಶಗಳಾದ ಲಡಾಖ್‌ನಲ್ಲಿ ಜನಗಣತಿಯನ್ನು ಸೆಪ್ಟೆಂಬರ್ 2026 ರಲ್ಲಿ ನಡೆಸಲಾಗುವುದು. ಎರಡನೇ ಹಂತವಾದ ಜನಸಂಖ್ಯಾ ಎಣಿಕೆಯನ್ನು ಫೆಬ್ರವರಿ 2027 ರಲ್ಲಿ ನಡೆಸಲಾಗುವುದು. ಈ ಪ್ರಕ್ರಿಯೆಯು ಧರ್ಮ, ಜಾತಿ, ಭಾಷೆ, ಸಾಕ್ಷರತೆ, ಆರ್ಥಿಕ ಚಟುವಟಿಕೆ,



ವಲಸೆ ಮತ್ತು ಫಲವತ್ತತೆ ದರಗಳು ಸೇರಿದಂತೆ ದೇಶದ ಜನಸಂಖ್ಯಾಶಾಸ್ತ್ರದ ಬಗ್ಗೆ ಪ್ರಮುಖ ಮಾಹಿತಿಯನ್ನು ಸಂಗ್ರಹಿಸುತ್ತದೆ.

ಜನಗಣತಿಯಲ್ಲಿ ಸರಿಸುಮಾರು 3 ಮಿಲಿಯನ್ ಕ್ಷೇತ್ರ ಕಾರ್ಯಕರ್ತರು ಕೆಲಸ ಮಾಡಲಿದ್ದು, 10.2 ಮಿಲಿಯನ್ ಮಾನವ ದಿನಗಳ ಉದ್ಯೋಗವನ್ನು ಸೃಷ್ಟಿಸಲಿದ್ದಾರೆ. ಹೆಚ್ಚುವರಿಯಾಗಿ, ಸುಮಾರು 18,600 ತಾಂತ್ರಿಕ ಸಿಬ್ಬಂದಿ 550 ದಿನಗಳವರೆಗೆ ಸ್ಥಳೀಯ ಮಟ್ಟದಲ್ಲಿ ಡಿಜಿಟಲ್ ಡೇಟಾ ನಿರ್ವಹಣೆ ಮತ್ತು ಮೇಲ್ವಿಚಾರಣೆಗೆ ಸಹಾಯ ಮಾಡುತ್ತಾರೆ.

ಡಿಸೆಂಬರ್ 12 ರಂದು ಪ್ರಧಾನಿ ನರೇಂದ್ರ ಮೋದಿ ಅವರ ಅಧ್ಯಕ್ಷತೆಯಲ್ಲಿ ನಡೆದ ಕೇಂದ್ರ ಸಚಿವ ಸಂಪುಟ ಸಭೆಯು ?11,718.24 ಕೋಟಿ ವೆಚ್ಚದಲ್ಲಿ 2027 ರ ಜನಗಣತಿಗೆ ಅನುಮೋದನೆ ನೀಡಿದೆ .

ಡಿಜಿಟಲ್ ಸಾಧನಗಳು ಮತ್ತು ಮೊಬೈಲ್ ಅಪ್ಲಿಕೇಶನ್‌ಗಳ ಬಳಕೆಯಲ್ಲಿ ಕ್ಷೇತ್ರ ಸಿಬ್ಬಂದಿಗೆ ತರಬೇತಿ ನೀಡಲಾಗುವುದು.

# ಬಾಂಗ್ಲಾದಲ್ಲಿ ಹಿಂದೂಗಳ ಹತ್ಯೆಗೆ ಖಂಡಿಸಿ ಪ್ರತಿಭಟನೆ




**ಮೈಸೂರು: ಡಿ.27:–** ಬಾಂಗ್ಲಾದೇಶದಲ್ಲಿ ಹಿಂದೂಗಳ ಹತ್ಯೆ, ಹಿಂಸಾಚಾರ ಖಂಡಿಸಿ ಮೈಸೂರು ಕನ್ನಡ ವೇದಿಕೆ ವತಿಯಿಂದ ಅಗ್ರಹಾರ ವೃತ್ತದಲ್ಲಿ ಪ್ರತಿಭಟನೆ ನಡೆಸಲಾಯಿತು.

ಬಾಂಗ್ಲಾದೇಶದಲ್ಲಿ ಹಿಂದೂಗಳ ಮೇಲೆ ಕಳೆದ ಒಂದು ವರ್ಷದಿಂದ ದಾಳಿ ನಡೆಯುತ್ತಿದೆ. ಅಲ್ಲಿನ ಪ್ರಧಾನಮಂತ್ರಿಗೆ ಭಾರತದಲ್ಲಿ ನೆಲೆ ಕೊಟ್ಟ ಮೇಲೆ ಹಿಂದೂಗಳ ಮೇಲಿನ ದಾಳಿ ತೀವ್ರವಾಗಿದೆ ಹಿಂದೂಗಳ ಮನೆಗೆ ನುಗ್ಗಿ ಹೆಣ್ಣು ಮಕ್ಕಳ ಮೇಲೆ ಅತ್ಯಾಚಾರ ಮಾಡುತ್ತಿದ್ದಾರೆ. ಇಷ್ಟೆಲ್ಲ ನಡೆಯುತ್ತಿದ್ದರೂ ದೇಶದ ಪ್ರಧಾನಿ ಇದರ ಬಗ್ಗೆ ಒಂದು ಹೇಳಿಕೆಯನ್ನೂ ನೀಡುತ್ತಿಲ್ಲ. ಬದಲಿಗೆ ವಿದೇಶ ಸುತ್ತುವ ಗುಂಗಿನಲ್ಲಿದ್ದಾರೆ. ನಮ್ಮ ದೇಶದಿಂದ ವಿಭಜನೆಯಾದ ಬಾಂಗ್ಲಾದೇಶದಲ್ಲಿನ ಹಿಂದೂಗಳಿಗೆ ಯಾವುದೇ ರೀತಿಯ ಸಾಂತ್ವನ ಹೇಳುತ್ತಿಲ್ಲ ಎಂದು ದೂರಿದರು.

ದೇಶ ರಾಮ ರಾಜ್ಯವಾದರೆ ಪಕ್ಕದ ದೇಶ ರಾವಣನ ರಾಜ್ಯವಾಗಿದೆ. ಅಲ್ಲಿರುವ ಹಿಂದೂಗಳು ನಮ್ಮನ್ನು ಭಾರತಕ್ಕೆ ಕರೆಸಿಕೊಳ್ಳಿ ಎಂದು ಅಂಗಲಾಚಿ ಬೇಡುತ್ತಿದ್ದಾರೆ. ಆದರೆ, ನಮ್ಮ ವಿದೇಶಾಂಗ ಸಚಿವರು ಗಂಟೆಗೊಂದು ಮಾತನಾಡುತ್ತಿದ್ದಾರೆ. ನಮ್ಮ ಶತ್ರು ದೇಶವಾದ ಪಾಕಿಸ್ತಾನದ ಉಗ್ರಗಾಮಿಗಳು ಬಾಂಗ್ಲಾದೇಶದ ಹಿಂದೂಗಳ ಮೇಲೆ ಹಲ್ಲೆ ನಡೆಸಲು ಪ್ರೇರಣೆ ನೀಡುತ್ತಿದ್ದಾರೆ. ಈ ಉಗ್ರಗಾಮಿಗಳನ್ನು ಮಟ್ಟ ಹಾಕಲು ಅಮೆರಿಕಕ್ಕೆ ಮಾಹಿತಿ ನೀಡಿ, ಅವರ ಮೇಲೆ ಕ್ರಮ ತೆಗೆದುಕೊಳ್ಳಬೇಕೆಂದು ಪ್ರಧಾನಿ ನರೇಂದ್ರ ಮೋದಿಯವರು ಒತ್ತಾಯಿಸಬೇಕು ಎಂದು ಆಗ್ರಹಿಸಿದರು.

ಈಗಾಗಲೇ ದೇಶದೊಳಗೆ ಬಾಂಗ್ಲಾದೇಶದಿಂದ ಲಕ್ಷಾಂತರ ಜನ ನುಗ್ಗಿದ್ದು, ಕೆಲವರು ಆಧಾರ್ ಕಾರ್ಡ್ ಮಾಡಿಸಿಕೊಂಡು ಮತದಾರರಾಗಿದ್ದಾರೆ. ಇದಕ್ಕೆ ಪಶ್ಚಿಮ ಬಂಗಾಳದ ಮುಖ್ಯಮಂತ್ರಿಯೇ ಕಾರಣ. ದೇಶದಲ್ಲಿ ಬಿಜೆಪಿ ಅಧಿಕಾರ ಬಂದಿದ್ದರೂ ಯಾವೊಬ್ಬ ಕಾರ್ಯಕರ್ತರೂ ಬಾಂಗ್ಲಾದೇಶ ಹಿಂದೂಗಳ ಪರವಾಗಿ ನಿಲ್ಲುತ್ತಿಲ್ಲ. ಇವರೆಲ್ಲರೂ ಮತ ಬೇಕಾದ ಸಮಯದಲ್ಲಿ ನಾವು ಹಿಂದೂಗಳು ಎನ್ನುತ್ತಾರೆ. ದೇಶದ ಯಾವ ರಾಜ್ಯದಲ್ಲೂ ಬಿಜೆಪಿಯವರು ಇದರ ವಿರುದ್ಧ ಹೋರಾಟ ಮಾಡುತ್ತಿಲ್ಲ. ಕೇವಲ ಹಿಂದೂ ಸಂಘಟನೆಗಳು, ಭಜರಂಗದಳ, ಇನ್ನಿತರ ಸಂಘಟನೆಗಳು ಬೀದಿಗಿಳಿದು ಹೋರಾಟ ಮಾಡುತ್ತಿವೆ. ಹೀಗಾಗಿ ಕೂಡಲೇ ಪ್ರಧಾನಿ ನರೇಂದ್ರ ಮೋದಿ ಮಧ್ಯ ಪ್ರವೇಶಿಸಿ ಹಿಂದೂಗಳ ರಕ್ಷಣೆಗೆ ಮುಂದಾಗಬೇಕೆಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ವೇದಿಕೆ ಅಧ್ಯಕ್ಷ ಎಸ್. ಬಾಲಕೃಷ್ಣ, ಪ್ಯಾಲೇಸ್ ಬಾಬು, ನಾಲಾಬೀದಿ ರವಿ, ಗೋಪಿ, ಗುರುಬಸಪ್ಪ, ಬೋಗಾದಿ ಸಿದ್ದೇಗೌಡ, ಹರೀಶ್, ಸಾಯಿ ಚಾಮರಾಜು, ಎಸ್‌ಐಸಿ ಸಿದ್ದಪ್ಪ, ಹೊನಕೆರೆ ಸ್ವಾಮಿ, ಮಾದಪ್ಪ, ಚಿನ್ನಪ್ಪ, ಶಿವು ಗೌಡ, ಸ್ವಾಮಿ ಗೈಡ್, ರಮೇಶ್, ರೈತ ಪರ್ವ ಅಧ್ಯಕ್ಷ ಅರುಣ್ ಸೇರಿದಂತೆ ಹಲವರು ಭಾಗವಹಿಸಿದ್ದರು.

# ಸಿರವಾರ: ಪ.ಪಂ.ಸದಸ್ಯರಿಂದ ನೂತನವಾಗಿ ಆಯ್ಕೆಗೊಂಡ ಪತ್ರಕರ್ತರಿಗೆ ಸನ್ಮಾನ



ಯುವಮಾರ್ಗ ಸುದ್ದಿ

**ಸಿರವಾರ, ಡಿ.27–** ಪಟ್ಟಣ ಪಂಚಾಯತಿಯ 14ನೇ ವಾರ್ಡಿನ ಸದಸ್ಯರಾದ ಅಜೀತಕುಮಾರ್ ಹೊನ್ನಟಿಗಿ ಹಾಗೂ ಅವರ ಸಹೋದರ ಅನೀಲ್ ಕುಮಾರ್ ಹೊನ್ನಟಿಗಿ ವಕೀಲರು ಅವರಿಂದ ಇತ್ತೀಚೆಗೆ ಜಿಲ್ಲಾ ಹಾಗೂ ತಾಲೂಕು ಪತ್ರಕರ್ತರ ಸಂಘಕ್ಕೆ ನೂತನವಾಗಿ ಆಯ್ಕೆಗೊಂಡ ಪತ್ರಕರ್ತರಿಗೆ ಶುಕ್ರವಾರ ಪಟ್ಟಣದ ಪ್ರವಾಸಿ ಮಂದಿರದಲ್ಲಿ ಸನ್ಮಾನಿಸಿ ಅಭಿನಂದನೆ ಸಲ್ಲಿಸಿದರು.

ರಾಯಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಚುನಾವಣೆಯಲ್ಲಿ ಜಿಲ್ಲಾ ಕಾರ್ಯಕಾರಣಿ ಸಮಿತಿ ಸದಸ್ಯರಾಗಿ ಗೆಲುವುವಸಾಧಿಸಿದ ಸಿರವಾರ ತಾಲೂಕು ಪತ್ರಕರ್ತರ ಸಂಘದ ಮಾಜಿ ಅಧ್ಯಕ್ಷರೂ ಆದ ಎಂ.ಗುಂಡಪ್ಪ, ತಾಯಪ್ಪ ಬಿ. ಹೊಸೂರು, ಸಿರವಾರ ತಾಲೂಕು ಘಟಕದ ನೂತನ ಅಧ್ಯಕ್ಷರಾಗಿ ಆಯ್ಕೆಗೊಂಡ ಹನುಮೇಶ, ಪ್ರಧಾನ ಕಾರ್ಯದರ್ಶಿ ನಾಗರಾಜ ಕರಿಬಿಲ್ಕರ್, ಉಪಾಧ್ಯಕ್ಷ ಮಹ್ಮದ್ ಸಾಬ, ಖಜಾಂಚಿ ಮೌನೇಶ ಪಾಟೀಲ್, ಕಾರ್ಯದರ್ಶಿ ಮಹೇಶ ಪಾಟೀಲ್, ಕಾರ್ಯಕಾರಿ ಸಮಿತಿ ಸದಸ್ಯರಾದ ವಿಜಯಕುಮಾರ್ ಎಸ್, ಲಕ್ಷ್ಮಣ ಪೋತಾಪೂರು, ಮಾನ್ವಿ ತಾಲೂಕು ಘಟಕದ ಅಧ್ಯಕ್ಷರಾದ ಅಶೋಕ ತಡಕಲ್, ಸದಸ್ಯರಾದ ಅಜಯಕುಮಾರ್ ಸೇರಿದಂತೆ ಎಲ್ಲಾ ನೂತನ ಪದಾಧಿಕಾರಿಗಳಿಗೆ ಸನ್ಮಾನಿಸಲಾಯಿತು.

ನಂತರ ಪಟ್ಟಣ ಪಂಚಾಯತ್ ಸದಸ್ಯ ಅಜಿತ್ ಕುಮಾರ ಹೊನ್ನಟಗಿ ಅವರು ಮಾತನಾಡಿ, "ಸಮಾಜದ ಧ್ವನಿಯಾಗಿ ಕಾರ್ಯನಿರ್ವಹಿಸುವ ಪತ್ರಕರ್ತರ ಸೇವೆ ಅಮೂಲ್ಯ. ಅವರ ಕಾರ್ಯಕ್ಕೆ ಗೌರವ ಸಲ್ಲಿಸುವುದು ನಮ್ಮ ಕರ್ತವ್ಯ" ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದಲ್ಲಿ ಕನ್ನಡ ಸಾಹಿತ್ಯ ಪರಿಷತ್ (ಕಸಾಪ) ಮಾಜಿ ಅಧ್ಯಕ್ಷ ಮೂಕಪ್ಪ ಕಟ್ಟಿಮನಿ, ಮಾರೆಪ್ಪ, ಚನ್ನಪ್ಪ ಬೂದಿನಾಳ, ನದೀಮ್ ಪಾಷ, ಜಯರಾಜ್, ಪಾರ್ಥ, ಮೇಷಕ್ ದೊಡ್ಮನೆ, ಅಮರೇಶ ಚೌದರಿ, ಸುರೇಶ್ ಕಾತರಕಿ, ಈರೇಶ್ ಹರವಿ, ಅಮರೇಶ ಹಿರೆಬಾದರದಿನ್ನಿ, ನಿರಂಜನ, ಕನ್ಯಾಕುಮಾರ ಹೊನ್ನಟಗಿ, ಮುತ್ತಣ್ಣ ಚಾಗಬಾವಿ, ಹುಲಿಗೆಪ್ಪ ಯಾಕ್ಲಾಸಪುರ, ವಿಜಯ ಪ್ರಕಾಶ್, ಮಲ್ಲಿಕಾರ್ಜುನ ಅತ್ತನೂರ್, ವೀರೇಶ್ ಗಣದಿನ್ನಿ, ವಿರುಪಾಕ್ಷಿ ಹಳ್ಳಿಹೋಸೂರು, ಪ್ರಭಾಕರ, ಸುಂದರ ರಾಜ್, ವೀರೇಶ್ ಹರವಿ, ವೀರೇಶ್ ಗಣದಿನ್ನಿ, ವಿಜಯ ಪ್ರಕಾಶ್, ವೀರೇಶ್ ಗಣದಿನ್ನಿ, ವೀರೇಶ್ ಗಣದಿನ್ನಿ, ವೀರೇಶ್ ಗಣದಿನ್ನಿ, ವಿರುಪಾಕ್ಷಿ ಹಳ್ಳಿಹೋಸೂರು, ಪ್ರಭಾಕರ, ಸುಂದರ ರಾಜ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಪ್ರತಿಯೊಬ್ಬರು ಕಾನೂನು ಪಾಲನೆ ಮಾಡಿ: ಗುರುಚಂದ್ರ ಯಾದವ್ ಪಿಎಸ್ಐ



ಯುವಮಾರ್ಗ ಸುದ್ದಿ

**ಮಸ್ಕಿ,ಡಿ.27–** ತಾಲೂಕಿನ ಹಾಲಾಪೂರದ ಜನನಿ ಪದವಿ ಪೂರ್ವ ಕಾಲೇಜಿನಲ್ಲಿ ಕವಿತಾಳ ಪೊಲೀಸ್ ಠಾಣೆ ವತಿಯಿಂದ ಅಪರಾಧ ತಡೆ ಮಾಸಾಚರಣೆ ಕಾರ್ಯಕ್ರಮ ನಡೆಯಿತು. ಕಾರ್ಯಕ್ರಮದ ಕುರಿತು ಪಿಎಸೈ ಗುರುಚಂದ್ರ ಯಾದವ್ ಮಾತಾಡುತ್ತಾ ಪ್ರತಿಯೊಬ್ಬರು ಕಾನೂನು ಪಾಲಿಸಬೇಕು, ಕಾನೂನು ನಮ್ಮೆಲ್ಲರಿಗೂ ಅವಶ್ಯಕ. ವಿದ್ಯಾರ್ಥಿಗಳು ನೀವು ವಿಶೇಷವಾಗಿ ಯಾವುದೇ ಕೆಟ್ಟ ಚಟಗಳಿಗೆ ಬಲಿಯಾಗದೆ ಅಭ್ಯಾಸ ಕಡೆ ಗಮನ ಕೊಡಿ ಹಾಗೇ ವಿದ್ಯಾರ್ಥಿನಿಯರು ಬಾಲ್ಯ ವಿವಾಹ ತಡೆಗಟ್ಟವಲ್ಲಿ ನಿಮ್ಮ ಪಾತ್ರ ದೊಡ್ಡದು ಸಹಕರಿಸಬೇಕು, ಇಂದು ನಿಮಗಾಗಿ ಸರ್ಕಾರ ಅನೇಕ ಕಾನೂನಗಳನ್ನು ರೂಪಿಸಿದ್ದು ಸರಿಯಾಗಿ ಸದ್ಬಳಿಕೆ ಮಾಡಿಕೊಂಡು ಸಮಾಜದಲ್ಲಿ ಉನ್ನತ ಹುದ್ದೆ ಹೊಂದಿ ಆದರ್ಶ ಪುರುಷರಾಗಿ ಬದುಕಬೇಕೆಂದು ಪಿಎಸ್ಐ ಗುರುಚಂದ್ರ ಯಾದವ್ ಹೇಳಿದರು. ಈ ಸಂದರ್ಭದಲ್ಲಿ ಉಪನ್ಯಾಸಕರಾದ ಸಿದ್ದಾರ್ಥ್ ಪೂ.ಪಾ , ಮರಿಸ್ವಾಮಿ, ವೀರೇಶ ಜೆ, ರಾಮಣ್ಣ ನಾಯಕ್, ದುರ್ಗೇಶ್, ಮಲ್ಲಿಕಾರ್ಜುನ ಪೊಲೀಸ್ ಇದ್ದರು.

# ಅಯ್ಯಪ್ಪ ಸ್ವಾಮಿ ಮಾಲಾಧಾರಿಗಳಿಗೆ ಅನ್ನ ಸಂತರ್ಪಣೆ ಮಾಡುವ ಮೂಲಕ ಭಾವೈಕ್ಯತೆ ಮೆರೆದ ಮುಸ್ಲಿಂ ಮುಖಂಡ ಅಬ್ದುಲ್ ಕರೀಮ್ ಸಾಬ್





ಯುವಮಾರ್ಗ ಸುದ್ದಿ

**ಕವಿತಾಳ ,ಡಿ.27–** ರಾಯಚೂರು ಜಿಲ್ಲೆಯ ಸಿರವಾರ ತಾಲೂಕಿನ ಕವಿತಾಳ ಪಟ್ಟಣದ ಮುಸ್ಲಿಂ ಮುಖಂಡ ಅಬ್ದುಲ್ ಕರೀಂ ಸಾಬ್ ತಮ್ಮ ಮನೆಯಲ್ಲಿ ಅಯ್ಯಪ್ಪ ಸ್ವಾಮಿ ಮಾಲಾಧಾರಿಗಳಿಗೆ ಅನ್ನ ಸಂತರ್ಪಣೆ ಮಾಡುವ ಮೂಲಕ ಭಾವೈಕ್ಯತೆ ಮೆರೆದಿದ್ದಾರೆ.

ಪೂಜಾ ಕಾರ್ಯಕ್ರಮ ಮುಗಿಸಿಕೊಂಡು ಮನೆಗೆ ಬಂದ ಅಯ್ಯಪ್ಪಸ್ವಾಮಿ ಮಾಲಾಧಾರಿಗಳಿಗೆ ಬಿ.ಎ.ಕರೀಂಸಾಬ್ ಸ್ವತಃ ಊಟ ಬಡಿಸಿದರು. ಹೋಳಿಗೆ, ಚಪಾತಿ, ಪಲ್ಯ, ಹಸಿ ತರಕಾರಿ, ಚಿತ್ರಾನ್ನ , ಹಪ್ಪಳ , ಅನ್ನ ಸಾಂಬಾರು ಉಣಬಡಿಸಿದರು.

'ಅಯ್ಯಪ್ಪ ಸ್ವಾಮಿ ಭಕ್ತರಾಗಲು ಯಾವುದೇ ಜಾತಿ, ಧರ್ಮದ ಭೇದವಿಲ್ಲ. ಹೀಗಾಗಿ ಕಳೆದ ನಾಲ್ಕು ವರ್ಷಗಳಿಂದ ಅಯ್ಯಪ್ಪಸ್ವಾಮಿ ಭಕ್ತರಿಗೆ ಮನೆಯಲ್ಲಿ ಭೋಜನ ವ್ಯವಸ್ಥೆ ಮಾಡುತ್ತಿದ್ದೇನೆ. ಧರ್ಮ, ಜಾತಿ ಎಣಿಸದೇ ಮಾನವಕುಲಕ್ಕೆ ಒಳಿತನ್ನು ಬಯಸುವುದು ಶ್ರೇಷ್ಠ ಎಂಬುದು ನನ್ನ ನಂಬಿಕೆ' ಹಿಂದೂ–ಮುಸ್ಲಿಂ ಭಾವೈಕ್ಯತೆ ಪರಸ್ಪರ ಗೌರವ, ಸಾಮರಸ್ಯ ಮತ್ತು ಸಹೋದರತ್ವದೊಂದಿಗೆ ಬದುಕಬೇಕು ಧಾರ್ಮಿಕ ಆಚರಣೆಗಳ ಭಿನ್ನತೆಗಳ ನಡುವೆಯೂ ಹಬ್ಬಗಳಲ್ಲಿ ಭಾಗವಹಿಸುವುದು, ಒಟ್ಟಾಗಿ ಹಬ್ಬ ಆಚರಿಸುವುದು, ಪ್ರಾರ್ಥನಾ ಸ್ಥಳಗಳಿಗೆ ಭೇಟಿ ನೀಡಿ ಪರಸ್ಪರ ಒಳಿತಿಗಾಗಿ ಹಾರೈಸುವಂತಹ ಹಲವಾರು ನಿದರ್ಶನಗಳ ಮೂಲಕ ವ್ಯಕ್ತವಾಗುತ್ತದೆ, ಭಾರತದಂತಹ ದೇಶದಲ್ಲಿ ಇದು ಒಂದು ದೊಡ್ಡ ಶಕ್ತಿಯಾಗಿದೆ. ನಾವು ಪ್ರಸಾದ ವ್ಯವಸ್ಥೆ ಮಾಡುವುದು ಕುಟುಂಬದವರೆಲ್ಲ ಸೇವೆ ಮಾಡುವುದು ನಮ್ಮ ಮನಸ್ಸಿಗೆ ತೃಪ್ತಿ ಕೊಡುತ್ತದೆ ಎಂದು ಕರೀಂಸಾಬ್ ಹೇಳಿದರು...ಅಯ್ಯಪ್ಪ ಭಕ್ತರಿಗೆ ಯಾವುದೇ ಜಾತಿ, ಧರ್ಮದ ಭೇದ□ಭಾವ ಇಲ್ಲ. ಹಿಂದೂ, ಮುಸ್ಲಿಂ, ಕ್ರೈಸ್ತ ಹೀಗೆ ಯಾವುದೇ ಧರ್ಮದವರ ಮನೆಯಲ್ಲಿ ಪೂಜೆ ಮಾಡಲು ಮತ್ತು ಪ್ರಸಾದ ಸ್ವೀಕರಿಸಲು ಅವಕಾಶವಿದೆ. ಭಕ್ತಿಯಿಂದ ಆಹ್ವಾನ ನೀಡಿದರೆ ನಾವು ತಿರಸ್ಕರಿಸುವುದಿಲ್ಲ' ಎಂದು ಗುರುಸ್ವಾಮಿ ಚನ್ನಯ್ಯ ಸ್ವಾಮಿ ತಿಳಿಸಿದರು..ಈ ಭಾಗದಲ್ಲಿ ಬಿ.ಎ.ಕರೀಂಸಾಬ್ ಅವರು ಸತತ ನಾಲ್ಕು ವರ್ಷಗಳಿಂದ ಭಕ್ತರಿಗೆ ಪ್ರಸಾದ ವ್ಯವಸ್ಥೆ ಮಾಡುತ್ತಿದ್ದಾರೆ' ಎಂದು ಮೆಚ್ಚುಗೆ ವ್ಯಕ್ತಪಡಿಸಿದರು... ಈ ಪ್ರಸಾದ ವ್ಯವಸ್ಥೆಯ ಕಾರ್ಯಕ್ರಮದಲ್ಲಿ ಕವಿತಾಳ್ ಪೀಠದ ಎಲ್ಲಾ ಅಯ್ಯಪ್ಪ ಸ್ವಾಮಿ ಮಾಲಾಧಾರಿಗಳು, ಬಿ ಅಬ್ದುಲ್ ಕರೀಮ್ ಸಾಬ್ ಅವರ ಕುಟುಂಬದವರಾದ ಎಂ ಎ ವಹಾಬ್ , ಇರ್ಫಾನ್ ಕೆ , ಮಹಮ್ಮದ್ ಕಲೀಮ್ , ಇನ್ನಿತರರು ಸೇವೆ ಸಲ್ಲಿಸಿದರು..

# ಸರ್ಕಾರಿ ನೌಕರರ ಕ್ರೀಡಾಕೂಟ, ಸಾಂಸ್ಕೃತಿಕ ಸ್ಪರ್ಧೆಗಳ ನೋಂದಣಿಗೆ ಡಿಸೆಂಬರ್ 31 ಕೊನೆಯ ದಿನ

ಯುವಮಾರ್ಗ ಸುದ್ದಿ

**ರಾಯಚೂರು,ಡಿ.27–** ಇಲ್ಲಿನ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಕರ್ನಾಟಕ ರಾಜ್ಯ ಜಿಲ್ಲಾ ಸರಕಾರಿ ನೌಕರರ ಸಂಘ ರಾಯಚೂರು ಇವರ ಸಂಯುಕ್ತಾಶ್ರಯದಲ್ಲಿ 2025–26ನೇ ಸಾಲಿನ ರಾಯಚೂರು ಜಿಲ್ಲಾ ಮಟ್ಟದ ರಾಜ್ಯ ಸರ್ಕಾರಿ ನೌಕರರ ಕ್ರೀಡಾಕೂಟ ಮತ್ತು ಸಾಂಸ್ಕೃತಿಕ ಸ್ಪರ್ಧೆಗಳ ಸಂಘಟನೆಯನ್ನು ಜನವರಿ 8 ಹಾಗೂ 9ರ ಬೆಳಿಗ್ಗೆ 10 ಗಂಟೆಗೆ ನಗರದ ಮಹಾತ್ಮಗಾಂಧಿ ಜಿಲ್ಲಾ ಕ್ರೀಡಾಂಗಣದ ಹೊರಾಂಗಣ ಹಾಗೂ ಒಳಾಂಗಣ ಕ್ರೀಡಾಂಗಣದಲ್ಲಿ ಏರ್ಪಡಿಸಲಾಗಿದ್ದು, ಸ್ಪರ್ಧಾಳುಗಳು ಡಿಸೆಂಬರ್ 31ರೊಳಗಾಗಿ ನೋಂದಾಯಿಸಿಕೊಳ್ಳಬಹುದಾಗಿದೆ.

ಆನ್‌ಲೈನ್ ಲಿಂಕ್ : https://form.svhrt.com/6931869b0a0bd8c6f89eda9f ಮೂಲಕ ಜಿಲ್ಲೆಯ ಸರ್ಕಾರಿ ನೌಕರ ಸ್ಪರ್ಧಾಳುಗಳು ನೋಂದಣೆ ಮಾಡಿಕೊಂಡು ಕ್ರೀಡಾಕೂಟದಲ್ಲಿ ಭಾಗವಹಿಸಬಹುದು. ಆಫ್‌ಲೈನ್ ನೋಂದಣೆಗೆ ಅವಕಾಶವಿರುವುದಿಲ್ಲ. ಕ್ರೀಡಾ ತರಬೇತುದಾರರು, ಆರು ತಿಂಗಳೊಳಗಾಗಿ ನೇಮಕಗೊಂಡವರು, ತಾತ್ಕಾಲಿಕವಾಗಿ ನೇಮಕಗೊಂಡವರು, ಪ್ಯಾರಾ ಮಿಲಟರಿ, ಪೊಲೀಸ್, ಸಿ.ಆರ್.ಪಿ.ಎಫ್, ಅಗ್ನಿಶಾಮಕ ದಳ ಮೊದಲಾದ ಸಮವಸ್ತ್ರಧಾರಿತ ಸಿಬ್ಬಂದಿ ಈ ಕ್ರೀಡಾಕೂಟದಲ್ಲಿ ಭಾಗವಹಿಸಲು ಅವಕಾಶವಿರುವುದಿಲ್ಲ. ಈ ಕ್ರೀಡಾಕೂಟದಲ್ಲಿ ಭಾಗವಹಿಸಲು ಇಚ್ಛಿಸುವ ಎಲ್ಲಾ ಖಾಯಂ ಸರ್ಕಾರಿ ನೌಕರರು ತಾವು ಕೆಲಸ ಮಾಡುವ ಕಚೇರಿ ಮುಖ್ಯಸ್ಥರ ಸಹಿ ಇರುವ ಗುರುತು ಪತ್ರವನ್ನು (ಭಾವಚಿತ್ರ ಸಹಿತ) ಕಡ್ಡಾಯವಾಗಿ ಕ್ರೀಡಾಕೂಟದ ಸಮಯದಲ್ಲಿ ಹಾಜರುಪಡಿಸುವುದು. ಒಬ್ಬ ನೌಕರ ಕ್ರೀಡಾಪಟು 01 ಫೀಲ್ಡ್ ಮತ್ತು 02 ಟ್ರ್ಯಾಕ್ಅಥವಾ 01 ಟ್ರ್ಯಾಕ್ ಮತ್ತು 02 ಫೀಲ್ಡ್ ಸೇರಿ ಒಟ್ಟು 03 ಆಟಗಳಲ್ಲಿ ಮಾತ್ರ ಭಾಗವಹಿಸಬಹುದು. ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ರಾಯಚೂರು ಇಲ್ಲಿಗೆ ಸಂಪರ್ಕಿಸಬಹುದಾಗಿದೆ ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಾಜಿ ಸಚಿವ ಶಿವನಗೌಡ ನಾಯಕರ 2026 ರ ಹೊಸ ವರ್ಷದ ದಿನಚರಿ ವಿತರಣೆ :

## ದೇವದುರ್ಗ,ಅರಕೇರಿ ತಾಲೂಕಿನ ಅಭಿವೃದ್ಧಿಗೆ ಶಿವನಗೌಡರ ಜೊತೆ ನಾವೆಲ್ಲರೂ ಇರೋಣ: ಬಸಣ್ಣ ನಾಯಕ



ಯುವಮಾರ್ಗ ಸುದ್ದಿ

**ದೇವದುರ್ಗ,ಡಿ.27–** ಅರಕೇರಿ ತಾಲೂಕಿಗೆ ಬರುವ ಗಲಗ ಜಿಲ್ಲಾ ಪಂಚಾಯತ್ ವ್ಯಾಪ್ತಿಯ ಹಳ್ಳಿಗಳಿಗೆ ಮಾಜಿ ಸಚಿವ ದೇವದುರ್ಗ ವಿಧಾನ ಸಭಾ ಕ್ಷೇತ್ರದ ಮಾಜಿ ಬಿಜೆಪಿ ಶಾಸಕ ಕೆ ಶಿವನಗೌಡ ನಾಯಕ ಅವರ 2026 ರ ಹೊಸ ವರ್ಷದ ದಿನಚರಿಯನ್ನು ಮತದಾರರ ಮನೆ ಮನೆಗೆ ಅರಕೇರಿ ಬಿಜೆಪಿ ಎಸ್ಟಿ ಮೋರ್ಚಾ ಅಧ್ಯಕ್ಷ ಹಾಗೂ ಪ್ರಥಮ ದರ್ಜೆ ಗುತ್ತೇದಾರ ಬಸಣ್ಣ ನಾಯಕ ರಾಮುಲು ನೇತೃತ್ವದಲ್ಲಿ ಬಿಜೆಪಿ ಮುಖಂಡರು ತೆರಳಿ ವಿತರಿಸಿದರು,

ಬಳಿಕ ಬಸಣ್ಣ ನಾಯಕ ರಾಮುಲು ಮಾತನಾಡಿ ದೇವದುರ್ಗಕ್ಕೆ ಶಿವನಗೌಡ ನಾಯಕರಂತಹ ನಾಯಕರು ಬೇಕು. ತಾಲೂಕಿನಲ್ಲಿ ಶಿಕ್ಷಣ ಕ್ರಾಂತಿ, ಶಿಕ್ಷಣಕ್ಕಾಗಿ .ಹಳ್ಳಿಗಳ ಅಭಿವೃದ್ಧಿಗಾಗಿ ಸಾಕಷ್ಟು ಅನುದಾನ ತರುವ ಮೂಲಕ ಅಭಿವೃದ್ಧಿ ಪಡಿಸಿದ ಮಹಾನಾಯಕ, ನಾವು ಹಿಗಾಗಲೇ ಯಾವುದೇ ಊರಿಗೆ ಹೋದರೂ ಶಾಲೆಯ ಉತ್ತಮ ಕಟ್ಟಡಗಳನ್ನು ನೋಡಬಹುದು, ರಸ್ತೆ ಅಭಿವೃದ್ಧಿ, ತಾಲೂಕಿನ ಪ್ರತಿಯೊಂದು ಹಳ್ಳಿಗಳಲ್ಲಿ ದೇವಸ್ಥಾನ ಅಭಿವೃದ್ಧಿ. ಸಮುದಾಯ ಭವನಗಳು, ಗ್ರಾಮದಲ್ಲಿ ಬೀದಿ ದೀಪಗಳು, ಮನೆ ಇಲ್ಲದವರಿಗೆ ಮನೆ ತಂದು ಅದೆಷ್ಟೋ ಬಡವರಿಗೆ ಮನೆ ನೀಡಿದ್ದಾರೆ. ಅವರು ದೇವದುರ್ಗ ತಾಲ್ಲೂಕಿಗೆ ಮಾಡಿದ ಸಾಧನೆ ಹೇಳ್ತಾ ಹೋದ್ರೆ ಸಾಕಷ್ಟು ಇದಾವೆ, ತಾಲೂಕಿಗೆ ಅನೇಕ ಯೋಜನೆಗಳನ್ನು ತಂದು ಅಭಿವೃದ್ಧಿ ಪಡಿಸಿದ್ದಾರೆ, ಅಂತಹ ಮಹಾನಾಯಕ ಅಭಿವೃದ್ಧಿ ಹರಿಕಾರನ್ನು ಮುಂದಿನ 2028 ರ ವಿಧಾನ ಸಭಾ ಚುನಾವಣೆಯಲ್ಲಿ ಗೆಲ್ಲಿಸುವ ಮೂಲಕ ನಾವು ಎಲ್ಲರೂ ಅವರ ಜೊತೆ ಇರೋಣ ಎಂದರು,

ಇದೆ ಸಂದರ್ಭದಲ್ಲಿ ಪಲಕನಮರಡಿ ಗ್ರಾಮ ಪಂಚಾಯಿತಿ ಅಧ್ಯಕ್ಷ ಅಮರೇಶ ಊಟಿ, ಸಿದ್ದಣ್ಣ ತಾತ ವಂದಲಿ,ಮಲ್ಲಿಕಾರ್ಜುನ್ ಗೌಡ ವಂದಲಿ. ಭೀಮನಗೌಡ ವಂದಿಲಿ. ರಾಜಶೇಖರ ಪಾಟೀಲ್ ವಂದಿಲಿ. ಶಿವಪುತ್ರ ವಂದಿಲಿ ಸಿದ್ದಣ್ಣ ವಂದಿಲಿ. ಶಶಿಧರ್ ಗೌಡ ಪಲಕನಮರಡಿ. ಸುರೇಶ್ ಗಲಗ,ಪಲಕನಮರಡಿ ಗ್ರಾಮ ಪಂಚಾಯಿತಿ ಸದಸ್ಯ ದೇವರಾಜ ಪಲಕನಮರಡಿ ,ನಾಗರಾಜ್ ಸೌಹುಕಾರ್. ಮಲ್ಲೇಶ್ ನಾಯಕ್. ಕೊಳಕಪ್ಪ ದೇಸಾಯಿ. ಅಂಬಣ್ಣ ಮೂಡಲಗುಂಡ್ಡ. ಅಂಬಣ್ಣ ಊಟಿ. ಶಿವಗೇನಿ ಫಲಕನಮರಡಿ, ಸಿದ್ದಣ್ಣ ಹೊಸೂರು ಸೇರಿದಂತೆ ಅನೇಕರು ಭಾಗವಹಿಸಿದ್ದರು,

# ಬಸ್ಸಮ್ಮ ಬಸನಗೌಡ ಜಿನ್ನದ ನಿಧನ



**ಅರಕೇರಾ,ಡಿ.27–** ತಾಲೂಕಿನ ಮರಕಂದಿನ್ನಿ ಗ್ರಾಮದ ಹಿರಿಯ ಜೀವಿ ಬಸ್ಸಮ್ಮ ಬಸನಗೌಡ ಜಿನ್ನದ (80) ಶನಿವಾರ ನಿಧನರಾದರು.

ಮೃತರಿಗೆ ಪ್ರಾಥಮಿಕ ಶಾಲಾ ಶಿಕ್ಷಕರ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಆದನಗೌಡ ಸೇರಿದಂತೆ ಮೂವರು ಪುತ್ರರು, ಐದು ಜನ ಪುತ್ರಿಯರು ಇದ್ದಾರೆ. ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಶನಿವಾರ ಸಂಜೆ ನೆರವೇರಿತು

# ಎಂ.ಎನ್.ಆರ್.ಇ.ಜಿ.ಎ ನಿರ್ನಾಮ ನಿಲ್ಲಿಸಲು ಮೋದಿ ಸರ್ಕಾರಕ್ಕೆ ಸಂಯುಕ್ತ ಕಿಸಾನ್ ಮೋರ್ಚ್ ಎಚ್ಚರಿಕೆ.

ಯುವಮಾರ್ಗ ಸುದ್ದಿ



**ಸಿಂದನುರು,ಡಿ.27–**ತಾಲೂಕಿನ ಮುಳ್ಳೂರು, ಮಲ್ಲಾಪುರ, ಗ್ರಾಮದಲ್ಲಿ ಕೇಂದ್ರ ಸರ್ಕಾರದ ಹೊಸ ಕಾಯ್ದೆಯಾದ ನರೇಗಾ ಕಾರ್ಮಿಕರು ಸುಟ್ಟು ಹಾಕಿದರು. ಕೇಂದ್ರ ಸರ್ಕಾರ ಉದ್ಯೋಗ ಖಾತ್ರಿ ಯೋಜನೆ ಸಂಪೂರ್ಣವಾಗಿ ಮುಚ್ಚುವ ಹುನ್ನಾರ ಮಾಡುತ್ತಿದೆ ಎಂದು ಉದ್ಯೋಗ ಖಾತ್ರಿ ಕಾರ್ಮಿಕರು, ರೈತರು, ಆಕ್ರೋಶಗೊಂಡರು.ವಿಬಿ–ಜಿ.ಆರ್.ಎ.ಎಮ್.ಜಿ ಶಾಸನವು ಉದ್ಯೋಗದ ಶಾಸನಬದ್ದ ಹಕ್ಕನ್ನು ನಿರಾಕರಿಸುತ್ತದೆ. ವಿತ್ತೀಯ ಒಕ್ಕೂಟ ವ್ಯವಸ್ಥೆಯನ್ನು ಹಾಳುಮಾಡುತ್ತದೆ. ಜಿಎಸ್ಟಿ ಕಾಯ್ದೆಗೆ ತಿದ್ದುಪಡಿ ತರುವ ಮೂಲಕ ರಾಜ್ಯಗಳ ತೆರಿಗೆ ಅಧಿಕಾರವನ್ನು ಮರುಸ್ಥಾಪಿಸಬೇಕು. ತೆರಿಗೆ ಸಂಗ್ರಹದಲ್ಲಿ ರಾಜ್ಯಗಳಿಗೆ ಪಾಲನ್ನು ಶೇ.60 ರಷ್ಟು ಹೆಚ್ಚಿಸಬೇಕು. ದೇಶದಲ್ಲಿ ಬರುವ ಆದಾಯ ಕೇಂದ್ರಕ್ಕೆ ಹೊರಟಿದೆ ಬಡವರ ಉದ್ಯೋಗ ಖಾತ್ರಿ ರಾಜ್ಯ ಶೇ. 40 ರಷ್ಟು, ಕೇಂದ್ರ ಶೇ. 60 ರಷ್ಟು ಹಣ ಒದಗಿಸಬೇಕೆಂಬ ಹೊಸ ಕಾಯ್ದೆಯನ್ನು ಡಿಸೆಂಬರ್ 15 ರಂದು ಮಾಡಿದೆ. 20 ವರ್ಷಗಳಿಂದ ಉದ್ಯೋಗ ಖಾತ್ರಿಯ ಹಣ ಕೇಂದ್ರ ಸರ್ಕಾರವೆ ಕೊಟ್ಟಿದೆ. ಈಗ ಏಕಾಏಕಿ ಈ ರೀತಿ ಮಾಡಿ ಉದ್ಯೋಗವನ್ನ ಮುಚ್ಚಾವ ಮಾಸ್ಟರ್ ಪ್ಲಾನ್ ಕೇಂದ್ರ ಸರ್ಕಾರ ಮಾಡುತ್ತಿದೆ. ಈ ಹೊಸ ಕಾಯ್ದೆಯನ್ನು ಎಲ್ಲಾ ರೈತರು ಕೃಷಿಯಲ್ಲಿ ಕೆಲಸ ಮಾಡುವರು ವಿರೋಧಿಸಬೇಕಿದೆ ಎಂದು ಬಸವಂತರಾಯಗೌಡ ಕಲ್ಲೂರು, ಯಂಕೋಬ ಕುರುಬರು, ವಿರುಪಾಕ್ಷಗೌಡ, ನಾಗೇಶಗೌಡ, ಹೇಳಿದರು.

ಈ ವೇಳೆ: ಮಲ್ಲಾಪುರದ ಗಿರಿಜಮ್ಮ ನಾಯಕ, ಶೃತಿ ಮೇಟಿ, ಪಾರ್ವತಿ ಕುಂಬಾರ, ಮಲ್ಲಪ್ಪ ಬೆಟ್ಟಪ್ಪ, ನಾಗಮ್ಮ ಭಂಡಾರಿ ನಾಗವೇಣಿ ಹಾಗೂ ಮುಳ್ಳೂರು ಗ್ರಾಮದ ಅನುಸೂಯಮ್ಮ, ಖಾಜಾಬಿ, ನಾಗಮ್ಮ ಗೌಡ್ರು, ನೀಲಮ್ಮ ಮರಿಯಪ್ಪ ಹುಲ್ತಿಗಪ್ಪ, ಸೇರಿದಂತೆ ನೂರಾರು ರೈತರಿದ್ದರು.

Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H